ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 111

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 07–04–2026


## ಇನ್ನೆರಡು ವರ್ಷ ಸಿದ್ದು ಸಿಎಂ:ಪರಂ



**ಮೈಸೂರು,ಏ.6:** ಇನ್ನೂ ಎರಡು ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿ ಇರುತ್ತಾರೆ. 2023ರಲ್ಲಿ ಸಿದ್ದರಾಮಯ್ಯ ಸಿಎಂ ಎಂದು ಪಕ್ಷದ ಹೈಕಮಾಂಡ್ ಘೋಷಣೆ ಮಾಡಿತ್ತು. ಅದರ ಅವಧಿ 2028ರ ವರೆಗೆ ಇದೆ. ಹೈಕಮಾಂಡ್ ನೀವೇ 5 ವರ್ಷ ಸಿಎಂ ಎಂದು ಪ್ರತ್ಯೇಕವಾಗಿ ಸ್ಪಷ್ಟೀಕರಣ ಕೊಡುವ ಅವಶ್ಯಕತೆ ಇಲ್ಲ ಎಂದು ಗೃಹಸಚಿವ ಜಿ.ಪರಮೇಶ್ವರ್ ಹೇಳಿದರು.

ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಸಿಎಂ ಬದಲಾವಣೆ ವದಂತಿ ಬಗ್ಗೆ ಪ್ರತಿಕ್ರಿಯಿಸಿ 2013ರಲ್ಲಿ ಸಿದ್ದರಾಮಯ್ಯ 5 ವರ್ಷ ಸಿಎಂ ಎಂದು ಹೈಕಮಾಂಡ್ ಘೋಷಣೆ ಮಾಡಿರಲಿಲ್ಲ. ಆದರೂ ಅವರು ಐದು ವರ್ಷ ಸಿಎಂ ಆಗಿದ್ದರು. ಈ ಬಾರಿಯೂ ಪೂರ್ಣಾವಧಿ ಮುಗಿಸಬೇಕು ತಾನೇ ಎಂದರು.

ಹೈ ಕಮಾಂಡ್ ಯಾವ ಗೊಂದಲಗಳನ್ನ ಸೃಷ್ಟಿ ಮಾಡಿಲ್ಲ. ಯಾರು ಏನೇ ಹೇಳಿದರು ಅದು ಮುಖ್ಯ ಅಲ್ಲ. ಹೈಕಮಾಂಡ್ ಯಾವತ್ತಾದರೂ ಸಿದ್ದರಾಮಯ್ಯ ಅವಧಿ ಇಷ್ಟು ಎಂದು ಹೇಳಿದ್ಯಾ ಬದಲಾವಣೆ ಬಗ್ಗೆ ಮಾತನಾಡಿದ್ದಾರಾ ಅದರ ಅರ್ಥ ಆ ರೀತಿಯ ಯಾವ ಬೆಳವಣಿಗೆ ಇಲ್ಲ. ಸಿಎಂ ಸ್ಥಾನ ಬದಲಾವಣೆ ಮಾಡಬೇಕಾಗಿರುವುದು ಹೈಕಮಾಂಡ್. ಅಲ್ಲಿಯವರೆಗೆ ಯಾರು ಏನೇ ಮಾತನಾಡಿದ್ರು ಅದು ವೈಯಕ್ತಿಕ ಅಭಿಪ್ರಾಯ ಎಂದರು.

ಡಿ.ಕೆ ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿದ್ದಾರೆ. ಡಿಸಿಎಂ ಆಗಿದ್ದಾರೆ, ಅವರು ನಮ್ಮ ನಾಯಕರು, ಅವರಿಗೆ ಯಾವ ಸಮಸ್ಯೆಯೂ ಆಗಿಲ್ಲ. ನಮ್ಮ ಎಲ್ಲಾ ಶಾಸಕರು ಸಿಎಂ ಸ್ಥಾನಕ್ಕೆ ಅರ್ಹರು ಎಂದು ಸಿಎಂ ವಿಧಾನಸಭೆಯಲ್ಲೇ ಹೇಳಿದ್ದಾರೆ. ಅದರಲ್ಲಿ ನಾನು ಅರ್ಹ ಇನ್ನೊಬ್ಬರು ಎಂಬ ಪ್ರಶ್ನೆಯೇ ಬರುವುದಿಲ್ಲ. ಉಪಚುನಾವಣೆಯ ಫಲಿತಾಂಶಕ್ಕೂ ಬೇರೆ ವಿಚಾರಕ್ಕೆ ಸಂಬಂಧವೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ಉಪಚುನಾವಣೆ ಫಲಿತಾಂಶ ರಾಜ್ಯ ರಾಜಕೀಯದ ದಿಕ್ಸೂಚಿ ಅಲ್ಲ. ಉಪಚುನಾವಣೆಯ ಫಲಿತಾಂಶ ರಾಜ್ಯ ಸರ್ಕಾರಕ್ಕೆ ನೀಡುವ ಮಾರ್ಕ್ಸ್ ಕೂಡ ಅಲ್ಲ. ಅದರ ಫಲಿತಾಂಶದ ಮೇಲೆ ಯಾವ ಬದಲಾವಣೆಯೂ ಆಗುವುದಿಲ್ಲ. ಎರಡು ಕ್ಷೇತ್ರದಲ್ಲೂ ನಾವು ಗೆಲ್ಲುತ್ತೇವೆ. ಗ್ಯಾರಂಟಿ ಯೋಜನೆಗಳನ್ನು ಮೀರಿಯೂ ಈ ಸರ್ಕಾರದ ಆಡಳಿತ ದಕ್ಷತೆಗೆ ಜನ ಮತ ಹಾಕುತ್ತಾರೆ ಎಂದರು.

## ಸುವರ್ಣಗಿರಿ ವಿರಕ್ತಮಠ ಒಳಬಳ್ಳಾರಿಯ ಶ್ರೀ ಡಾ.ಸಿದ್ದಲಿಂಗ ಮಹಾಸ್ವಾಮಿಗಳ ಶೂನ್ಯ ಪೀಠರೋಹಣ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಅಡವಿ ಅಮರೇಶ್ವರ ಗ್ರಾಮದಲ್ಲಿನ ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದಲ್ಲಿ 72 ನೇ ಜಾತ್ರ ಮಹೋತ್ಸವದ ಅಂಗವಾಗಿ ನಡೆದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ಕಾರ್ಯಕ್ರಮದಲ್ಲಿನ ಪ್ರಸಂಗದಂತೆ ಸುವರ್ಣಗಿರಿ ವಿರಕ್ತಮಠ ಒಳಬಳ್ಳಾರಿಯ ಶ್ರೀ ಡಾ.ಸಿದ್ದಲಿಂಗ ಮಹಾಸ್ವಾಮಿಗಳು ಶೂನ್ಯ ಪೀಠರೋಹಣವನ್ನು ಮಾಡಿ ಧರ್ಮ ಸಂದೇಶವನ್ನು ನೀಡಿ 12 ನೇ ಶತಮಾನದಲ್ಲಿ ಬಸವಣ್ಣನವರು ಶೂನ್ಯ ಪೀಠದ ಪರಿಕಲ್ಪನೆಯನ್ನು ನೀಡಿ ಅಲ್ಲಮ ಪ್ರಭುಗಳನ್ನು ಪ್ರಥಮ ಅಧ್ಯಕ್ಷರನ್ನಾಗಿ ಮಾಡಿದರು.

ಶೂನ್ಯ ಪೀಠರೋಹಣ ಮಾಡಬೇಕಾದರೆ ಸಾಧಕರು ಮೊದಲು ಷಟ್ ಸ್ಥಲಗಳಾದ ಭಕ್ತ ,ಮಹೇಶ.ಪ್ರಸಾದಿ. ಪ್ರಾಣಲಿಂಗಿ,ಶರಣರಾದ ಮೇಲೆ ಐಕ್ಯ ಸ್ಥಳವನ್ನು ತಲುಪಿದಾಗ ಮಾತ್ರ ಶೂನ್ಯ ಪೀಠವನ್ನು ತಲುಪುವುದಕ್ಕೆ ಸಾಧ್ಯವಾಗುತ್ತದೆ ಆಗ ಗುರು ಮುಟ್ಟಿ ಗುರುವಾಗುವುದಕ್ಕೆ ಸಾಧ್ಯವಾಗುವುದು ವೀರಶೈವ ಲಿಂಗಾಯತ ಸಮಾಜದಲ್ಲಿ ಮಾತ್ರ ಸಾಧ್ಯವಾಗುತ್ತದೆ. ಸುವರ್ಣಗಿರಿ ವಿರಕ್ತಮಠ ಒಳಬಳ್ಳಾರಿಯ ಲಿಂ.ಶ್ರೀ ಚನ್ನಬಸವ ಶಿವಯೋಗಿಗಳು ಮಹಾನ್ ತಪಸ್ವಿಗಳಾಗಿದ್ದರು ಅವರು ನಡೆದಾಡಿದ ಸ್ಥಳಗಳೇಲ್ಲವು ಇಂದು ಪುಣ್ಯಕ್ಷೇತ್ರಗಳಾಗಿವೇ ಶ್ರೀ ಕ್ಷೇತ್ರದಲ್ಲಿ ಶ್ರೀಗಳು ಕಾಶಿಯಿಂದ ತಂದ ಲಿಂಗವನ್ನು ಪ್ರತಿಷ್ಠಾಪಿಸಿ ತಮ್ಮ ತಪಸ್ಸಿನಿಂದ ಪಡೆದ ಶಕ್ತಿಯನ್ನು ಧಾರೆಯೆರೆಯುವ ಮೂಲಕ ಜಾಗೃತ ಕ್ಷೇತ್ರವಾಗಿಸಿದ್ದಾರೆ. ಭಕ್ತರು ಶ್ರೀ ಅಡವಿ ಅಮರೇಶ್ವರ ಲಿಂಗದ ದರ್ಶನ ,ಪೂಜೆ ಮಾತ್ರದಿಂದಲೇ ಇಷ್ಟಾರ್ಥಗಳನ್ನು ಪಡೆದುಕೊಳ್ಳುವುದಕ್ಕೆ ಸಾಧ್ಯವಿದೆ , ಶಿವಯೋಗದ ಗಾಳಿ ಬಂದಿದೆ ತುರಿಕೊಂಡವರು ಒಳ್ಳೆ ಆಚಾರವಂತರಾಗಿ, ಜ್ಞಾನವಂತರಾಗಿ,ಸಂಸ್ಕಾರವಂತರಾಗಿ ತಮ್ಮ ಜೀವನವನ್ನು ಸಾಗಿಸುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಬೂದುಗುಂಪ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ನೀಡಿದರು.ಸಂಗೀತವನ್ನು ಅಮರೇಶ ಸಾಲಿಮಠ ಗವಾಯಿಗಳು ನೀಡಿದರು.

ಸುವರ್ಣಗಿರಿ ವಿರಕ್ತಮಠ ಒಳ್ಳಬಳ್ಳಾರಿಯ ಕಿರಿಯ ಶ್ರೀಗಳಾದ ಬಸವಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದ ಶ್ರೀ ತೊಂಟದಾರ್ಯ ಮಹಾಸ್ವಾಮಿಗಳು, ಹೊಸಪೇಟೆಯ ಶ್ರೀ ಸಿದ್ದಲಿಂಗದೇವರು ಸೇರಿದಂತೆ ಶ್ರೀಮಠದ ಭಕ್ತರು ಭಾಗವಹಿಸಿದರು.

### 15 ಲಕ್ಷ ಯೋಜನೆಗೆ ಕಳ್ಳಹಸ್ತ! ನೋಟಿಸ್ ನಾಟಕ, ಒಳಗೆ ಸೆಟ್ಟಿಂಗ್?

## ಮೂರು ಬಾರಿ ದೂರು ನೀಡಿದರೂ ಕ್ರಮ ಕೈಗೊಳ್ಳದ ಪುರಸಭೆ ವಿರುದ್ಧ ಕಿಡಿ

ಧೈರ್ಯದ ದಾರಿ

**ಮಾನ್ವಿ:** ತಾಲ್ಲೂಕು ಪುರಸಭೆ ವ್ಯಾಪ್ತಿಯಲ್ಲಿ ಸರ್ಕಾರದ 15 ಲಕ್ಷ ರೂಪಾಯಿಗಳ ಸಾರ್ವಜನಿಕ ಹಣವನ್ನು ಲೂಟಿ ಮಾಡುತ್ತಿರುವ ಗುತ್ತಿಗೆದಾರ ಮತ್ತು ಅವರಿಗೆ ಸಾಥ್ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಸಾರ್ವಜನಿಕ ಆಕ್ರೋಶ ವ್ಯಕ್ತಪಡಿಸಿದ್ದಾರೆ. 15ನೇ ಹಣಕಾಸು ಯೋಜನೆಯಡಿ ಘನತ್ಯಾಜ್ಯ ನಿರ್ವಹಣಾ ಘಟಕದ ಪ್ರವೇಶ ದ್ವಾರ ಮತ್ತು ಫೆನ್ಸಿಂಗ್ ಕಾಮಗಾರಿಯಲ್ಲಿ ನಡೆದಿರುವ ಕಳಪೆ ಮಟ್ಟದ ಕೆಲಸದ ಬಗ್ಗೆ ಕರ್ನಾಟಕ ವಿದ್ಯಾರ್ಥಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಶಾಂತ್ ಅವರು ಕಾರ್ಯಾಲಯಕ್ಕೆ ಮೂರು ಬಾರಿ ದೂರು ನೀಡಿದ್ದರೂ, ಅಧಿಕಾರಿಗಳು ಕೇವಲ 'ನೋಟಿಸ್' ನೀಡುವ ನಾಟಕವಾಡಿ ಕೈತೊಳೆದುಕೊಂಡಿದ್ದಾರೆ.

ಪುರಸಭೆಯು ಗುತ್ತಿಗೆದಾರ ಶ್ರೀ ಪಿ. ಆಂಜನೇಯ (ಅಪೂರ್ವ ಎಂಟರ್ ಪ್ರೈಸಸ್) ಅವರಿಗೆ ನೀಡಿದ ಅಂತಿಮ ನೋಟಿಸ್‌ನಲ್ಲಿ, ಮೂರು ದಿನಗಳ ಒಳಗೆ ಕಳಪೆ ಕಾಮಗಾರಿಯನ್ನು ಸರಿಪಡಿಸದಿದ್ದರೆ 'ಕಪ್ಪು ಪಟ್ಟಿಗೆ' (Blacklist) ಸೇರಿಸುವುದಾಗಿ ಎಚ್ಚರಿಕೆ ನೀಡಲಾಗಿತ್ತು. ಆದರೆ, ಈ ಗಡುವು ಮುಗಿದು ದಿನಗಳೇ ಉರುಳಿದರೂ ಕಾಮಗಾರಿಯಲ್ಲಿ ಕಿಂಚಿತ್ತೂ ಸುಧಾರಣೆ ಕಂಡಿಲ್ಲ.




ನೋಟಿಸ್ ಎನ್ನುವುದು ಕೇವಲ ಕಾಗದದ ಚೂರಾಗಿದ್ದು, ಗುತ್ತಿಗೆದಾರರು ಅದನ್ನು ಕಸದ ಬುಟ್ಟಿಗೆ ಎಸೆದಂತೆ ವರ್ತಿಸುತ್ತಿದ್ದಾರೆ. ಇಷ್ಟಾದರೂ ಪುರಸಭೆಯ ಮುಖ್ಯಾಧಿಕಾರಿಗಳು ಮತ್ತು ಇಂಜಿನಿಯರ್‌ಗಳು ಯಾವುದೇ ಕಠಿಣ ಕ್ರಮ ಕೈಗೊಳ್ಳದೆ ಮೌನಕ್ಕೆ ಶರಣಾಗಿರುವುದು, ಗುತ್ತಿಗೆದಾರ ಮತ್ತು ಅಧಿಕಾರಿಗಳ ನಡುವಿನ 'ಅಪವಿತ್ರ ಮೈತ್ರಿ'ಯನ್ನು ಎತ್ತಿ ತೋರಿಸುತ್ತಿದೆ.

ಸಾರ್ವಜನಿಕರ ತೆರಿಗೆ ಹಣವನ್ನು ಹಗಲು ದರೋಡೆ ಮಾಡುತ್ತಿರುವ ಇಂತಹ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಅಧಿಕಾರಿಗಳು ಏತಕ್ಕೆ ಹಿಂಜರಿಯುತ್ತಿದ್ದಾರೆ? ಮೂರು ದಿನದ ಗಡುವು ನೀಡಿದ ಮೇಲೂ ಕೆಲಸವಾಗದಿದ್ದರೆ ಆ ನೋಟಿಸ್‌ಗೆ ಬೆಲೆ ಎಲ್ಲಿದೆ? ಇದು ವ್ಯವಸ್ಥಿತವಾಗಿ ಸಾರ್ವಜನಿಕರ ಕಣ್ಣಿಗೆ ಮಣ್ಣೆರಚುವ ತಂತ್ರವಾಗಿದೆ. ಸರ್ಕಾರದ ಅನುದಾನವನ್ನು ವೈಯಕ್ತಿಕ ಲಾಭಕ್ಕೆ ಬಳಸಿಕೊಳ್ಳುತ್ತಿರುವ ಈ ಜಾಲದ ವಿರುದ್ಧ ಉನ್ನತ ಮಟ್ಟದ ತನಿಖೆಯಾಗಬೇಕು. ತಕ್ಷಣವೇ ಈ ಭ್ರಷ್ಟ ಗುತ್ತಿಗೆದಾರನ ಪರವಾನಗಿ ರದ್ದುಗೊಳಿಸಬೇಕು, ಇಲ್ಲವಾದಲ್ಲಿ ಪುರಸಭೆ ಕಚೇರಿ ಮುಂದೆ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಭೀಮಸೇನೆ ಕರ್ನಾಟಕ ವಿದ್ಯಾರ್ಥಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಶಾಂತ್ ತಿಳಿಸಿದ್ದಾರೆ.

## ಸಿಬ್ಬಂದಿ ಬಳಸಿಕೊಂಡು ಉತ್ತಮ ಸೇವೆ ನೀಡುವೆ: ನೂತನ ಪಿಎಸ್‌ಐ ಭರವಸೆ

ಧೈರ್ಯದ ದಾರಿ

**ಸಿರವಾರ:** ಕಳೆದ ಮೂರು ತಿಂಗಳಿಂದ ತೆರವಾಗಿದ್ದ ಸಿರವಾರ ಪೊಲೀಸ್ ಠಾಣೆಯ ಪಿಎಸ್‌ಐ ಹುದ್ದೆಗೆ ಕೊನೆಗೂ ಚಾಲನೆ ಸಿಕ್ಕಿದ್ದು, ನೂತನ ಅಧಿಕಾರಿಯಾಗಿ ಚಂದ್ರಶೇಖರ ಹಿರೇಮಠ ಅವರು ಸೋಮವಾರ ಅಧಿಕಾರ ಸ್ವೀಕರಿಸಿದರು.

ಹಿನ್ನೆಲೆ

ಈ ಹಿಂದೆ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಿಎಸ್‌ಐ ವೆಂಕಟೇಶ ನಾಯಕ ಅವರ ವರ್ಗಾವಣೆಯಾದ ನಂತರ, ಕಳೆದ ಮೂರು ತಿಂಗಳಿಂದ ಈ ಸ್ಥಾನ ಖಾಲಿ ಉಳಿದಿತ್ತು. ಸಾರ್ವಜನಿಕ ಕೆಲಸ ಕಾರ್ಯಗಳಿಗೆ ಇದರಿಂದ ಅಡಚಣೆಯಾಗಿತ್ತು. ಇದೀಗ ಸಿಂಧನೂರು ಟ್ರಾಫಿಕ್ ಪಿಎಸ್‌ಐ ಆಗಿ ಸೇವೆ ಸಲ್ಲಿಸುತ್ತಿದ್ದ ಚಂದ್ರಶೇಖರ ಹಿರೇಮಠ ಅವರನ್ನು ಸಿರವಾರ ಠಾಣೆಗೆ ಸ್ಥಳ ನಿಯೋಜನೆ ಮಾಡಲಾಗಿದ್ದು, ಅದರಂತೆ ಅವರು ಇಂದು ಅಧಿಕೃತವಾಗಿ ಜವಾಬ್ದಾರಿ ವಹಿಸಿಕೊಂಡರು.

ಸೇವೆಯ ಭರವಸೆ:

ಅಧಿಕಾರ ಸ್ವೀಕರಿಸಿದ ನಂತರ ಪತ್ರಿಕೆಯೊಂದಿಗೆ ಮಾತನಾಡಿದ ನೂತನ ಪಿಎಸ್‌ಐ ಚಂದ್ರಶೇಖರ ಹಿರೇಮಠ ಅವರು, "ನಾನು ರಾಯಚೂರು ಜಿಲ್ಲೆಯ ಹಾಲಾಪೂರು ಗ್ರಾಮದವನಾದ್ದರಿಂದ ಸಿರವಾರ ಭಾಗದ ಭೌಗೋಳಿಕತೆ ಮತ್ತು ಜನರ ಬಗ್ಗೆ ನನಗೆ ಮೊದಲೇ ಪರಿಚಯವಿದೆ. ಸಿರವಾರ ಠಾಣಾ ವ್ಯಾಪ್ತಿಯು ವಿಸ್ತಾರವಾಗಿದೆ. ಲಭ್ಯವಿರುವ ಸಿಬ್ಬಂದಿಯನ್ನು ಸರಿಯಾಗಿ ಬಳಸಿಕೊಂಡು, ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ," ಎಂದು ತಿಳಿಸಿದರು.



## ವಿಕಸಿತ ಭಾರತ ನಿರ್ಮಾಣಕ್ಕೆ ಬದ್ಧ : ಸಾಮೂಹಿಕ ಪ್ರಯತ್ನದಿಂದ ಪ್ರಗತಿ

**ನವದೆಹಲಿ,ಏ.6–** ವಿಕಸಿತ ಭಾರತ ನಿರ್ಮಿಸಲು ಬಿಜೆಪಿ ಬದ್ಧವಾಗಿದೆ. ನಮ ಸಾಮೂಹಿಕ ಸಂಕಲ್ಪವು ಈ ಉದ್ದೇಶವನ್ನು ಮತ್ತಷ್ಟು ಮುನ್ನಡೆಸಲಿ ಮತ್ತು ಭಾರತವನ್ನು ಪ್ರಗತಿ ಮತ್ತು ಸಮೃದ್ಧಿಯ ಹೊಸ ಎತ್ತರಕ್ಕೆ ಕೊಂಡೊಯ್ಯಲಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಆಶಿಸಿದ್ದಾರೆ. ಪಕ್ಷದ ಸಂಸ್ಥಾಪನಾ ದಿನದ ಸಂದರ್ಭದಲ್ಲಿ, ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಕನ್ನಡದಲ್ಲೇ ದೇಶಾದ್ಯಂತದ ಎಲ್ಲಾ ಬಿಜೆಪಿ ಕಾರ್ಯಕರ್ತರಿಗೆ ನನ್ನ ಹೃತ್ಪೂರ್ವಕ ಶುಭಾಶಯಗಳು ಎಂದು ಪೋಸ್ಟ್ ಮಾಡಿರುವ ಅವರು, ಬಿಜೆಪಿಯು ಜನಕಲ್ಯಾಣವನ್ನು ತನ್ನ ದೃಷ್ಟಿಕೋನದ ಮೂಲದಲ್ಲಿ ಇರಿಸುವ ಪಕ್ಷವಾಗಿದೆ. ಇದು ಕೇಂದ್ರದಲ್ಲಿ ಮತ್ತು ವಿವಿಧ ರಾಜ್ಯಗಳಲ್ಲಿ ನಮ ಕೆಲಸದಲ್ಲಿ ಪ್ರತಿಫಲಿಸುತ್ತದೆ ಎಂದಿದ್ದಾರೆ.ಭಾರತ ಮೊದಲು ತತ್ವಕ್ಕೆ ಯಾವಾಗಲೂ ಬದ್ಧವಾಗಿರುವ ನಮ ಪಕ್ಷವು ಸಮಾಜಕ್ಕೆ ಸೇವೆ ಸಲ್ಲಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದೆ. ನಮ ಕಾರ್ಯಕರ್ತರಾದವರು ತಮ ನಿಸ್ವಾರ್ಥ ಸೇವೆ, ಅಚಲ ಸಮರ್ಪಣೆ ಮತ್ತು ಉತ್ತಮ ಆಡಳಿತದ ಬಗ್ಗೆ ಆಳವಾದ ಉತ್ಸಾಹಕ್ಕೆ ಹೆಸರುವಾಸಿಯಾಗಿದ್ದಾರೆ.

ನಮ ಆದರ್ಶಗಳು ಮತ್ತು ಕೆಲಸಗಳೊಂದಿಗೆ ಗರಿಷ್ಠ ಸಂಖ್ಯೆಯ ಜನರನ್ನು ಸಂಪರ್ಕಿಸಲು ಅವರು ತಳಮಟ್ಟದಲ್ಲಿ ಅವಿಶ್ರಾಂತವಾಗಿ ಶ್ರಮಿಸಿದ್ದಾರೆ. ಕಳೆದ ಹಲವಾರು ದಶಕಗಳಲ್ಲಿ ಪಕ್ಷದ ಬೆಳವಣಿಗೆಯನ್ನು ರೂಪಿಸಿದ ಸಮರ್ಪಣೆ, ತ್ಯಾಗ ಮತ್ತು ಪರಿಶ್ರಮದಿಂದ ಅಸಂಖ್ಯಾತ ಕಾರ್ಯಕರ್ತರಿಗೆ ನಾವು ಗೌರವ ಸಲ್ಲಿಸುತ್ತೇವೆ ಎಂದು ಹೇಳಿದ್ದಾರೆ.

## ಏಪ್ರಿಲ್ 7ರಂದು ಬಸವಕಲ್ಯಾಣ ದಲ್ಲಿ ಇರುವ ಬಿ.ಕೆ.ಡಿ.ಬಿ ಆಯುಕ್ತರ ವಿರುದ್ಧ ಬೃಹತ್ ಹೋರಾಟ

ಧೈರ್ಯದ ದಾರಿ

**ಬೀದರ:–** ಜಿಲ್ಲೆಯ ಬಸವಕಲ್ಯಾಣದಲ್ಲಿರುವ ಬಸವಣ್ಣನವರ ಅರಿವಿನ ಮನೆ ಗವಿಯ ಪಕ್ಕದಲ್ಲಿ ಹಡಪದ ಅಪ್ಪಣ್ಣನವರ ಗವಿಯಲ್ಲಿ ಅವರದ್ದೇ ಮೂರ್ತಿ ಸ್ಥಾಪನೆಯಾಗಬೇಕು ಎಂಬುದು ಸಮಾಜದ ದೀರ್ಘಕಾಲದ ಮತ್ತು ನ್ಯಾಯಸಮ್ಮತವಾದ ಬೇಡಿಕೆಯಾಗಿದೆ.


ಈ ಕುರಿತ ಇತ್ತೀಚಿನ ಪ್ರಮುಖ ಅಂಶಗಳು ಇಲ್ಲಿವೆ:

ವಿವಾದದ ಹಿನ್ನೆಲೆ: ಇತ್ತೀಚೆಗೆ ಹಡಪದ ಅಪ್ಪಣ್ಣನವರ ಗವಿಯಲ್ಲಿ ಅನ್ಯ ಮೂರ್ತಿಗಳನ್ನು ಸ್ಥಾಪಿಸಲಾಗಿದೆ ಎಂಬ ವಿಷಯ ಸಮಾಜದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಸಮಾಜದ ಎಚ್ಚರಿಕೆ: ಗವಿಯಲ್ಲಿ ಪ್ರತಿಷ್ಠಾಪಿಸಲಾಗಿರುವ ಅನ್ಯ ಮೂರ್ತಿಗಳನ್ನು ತಕ್ಷಣವೇ ತೆರವುಗೊಳಿಸಿ, ಅಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿಯನ್ನೇ ಸ್ಥಾಪಿಸಬೇಕು. ಇಲ್ಲದಿದ್ದರೆ ಇದೇ ಏಪ್ರಿಲ್ 7ರಂದು ಬೆಳಿಗ್ಗೆ 10:30 ನಿಮಿಷಕ್ಕೆ ಬಿಕೆಡಿಬಿ ಆಫೀಸ್ ಎದರುಗಡೆ ಸಮಾಜದ ಬಂಧುಗಳ ಸಮ್ಮುಖದಲ್ಲಿ ಉಗ್ರ ಹೋರಾಟ ಮಾಡಲಾಗುವುದು. ಎಂದು ಬೀದರ ಜಿಲ್ಲೆಯ ಹಾಗೂ ಬಸವಕಲ್ಯಾಣ ತಾಲೂಕು ಹಡಪದ ಅಪ್ಪಣ್ಣ ಸಮಾಜದ ಮುಖಂಡರು ಬಿಕೆಡಿಬಿ ಅಧಿಕಾರಿಗಳಿಗೆ ಮತ್ತು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಐತಿಹಾಸಿಕ ಮಹತ್ವ: ಬಸವಣ್ಣನವರ ಆಪ್ತ ಒಡನಾಡಿಯಾಗಿದ್ದ ಹಡಪದ ಅಪ್ಪಣ್ಣನವರು ವಚನ ಸಾಹಿತ್ಯಕ್ಕೆ ನೀಡಿದ ಕೊಡುಗೆ ಅಪಾರ. ಅವರ ತಪೋಭೂಮಿಯಾದ ಈ ಗವಿಯಲ್ಲಿ ಅವರ ಸ್ಮರಣಾರ್ಥ ಮೂರ್ತಿ ಇರುವುದು ಸಾಂಸ್ಕೃತಿಕವಾಗಿ ಮತ್ತು ಭಾವನಾತ್ಮಕವಾಗಿ ಅತ್ಯಂತ ಅವಶ್ಯಕವಾಗಿದೆ. ಹಡಪದ ಅಪ್ಪಣನವರ ಗವಿಯಲ್ಲಿ ಹಡಪದ ಅಪ್ಪಣನವರ ಮೂರ್ತಿ ಸ್ಥಾಪನೆ ಆಗಲೇಬೇಕು ಬೀದರ್ ಜಿಲ್ಲೆಯ ಬಸವಕಲ್ಯಾಣದ 'ಲ್ಲಿರುವ ಹಡಪದ ಅಪ್ಪಣ್ಣನವರ ಗವಿಯಲ್ಲಿ ಅವರದ್ದೇ ಮೂರ್ತಿ ಸ್ಥಾಪನೆಯಾಗಬೇಕು ಎಂಬುದು ಸಮಾಜದ ದೀರ್ಘಕಾಲದ ಮತ್ತು ನ್ಯಾಯಸಮ್ಮತವಾದ ಬೇಡಿಕೆಯಾಗಿದೆ. ಈ ಕುರಿತ ಇತ್ತೀಚಿನ ಪ್ರಮುಖ ಅಂಶಗಳು ಇಲ್ಲಿವೆ:

ವಿವಾದದ ಹಿನ್ನೆಲೆ: ಇತ್ತೀಚೆಗೆ ಹಡಪದ ಅಪ್ಪಣ್ಣನವರ ಗವಿಯಲ್ಲಿ ಅನ್ಯ ಮೂರ್ತಿಗಳನ್ನು ಸ್ಥಾಪಿಸಲಾಗಿದೆ ಎಂಬ ವಿಷಯ ಸಮಾಜದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.




ಸಮಾಜದ ಎಚ್ಚರಿಕೆ: ಗವಿಯಲ್ಲಿ ಪ್ರತಿಷ್ಠಾಪಿಸಲಾಗಿರುವ ಅನ್ಯ ಮೂರ್ತಿಗಳನ್ನು ತಕ್ಷಣವೇ ತೆರವುಗೊಳಿಸಿ, ಅಲ್ಲಿ ಹಡಪದ ಅಪ್ಪಣ್ಣನವರ ಮೂರ್ತಿಯನ್ನೇ ಸ್ಥಾಪಿಸಬೇಕು. ಇಲ್ಲದಿದ್ದರೆ ಇದೇ ಏಪ್ರಿಲ್ 7ರಂದು ಉಗ್ರ ಹೋರಾಟ ಮಾಡಲಾಗುವುದು ಎಂದು ಹಡಪದ ಸಮಾಜದ ಮುಖಂಡರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಐತಿಹಾಸಿಕ ಮಹತ್ವ: ಬಸವಣ್ಣನವರ ಆಪ್ತ ಒಡನಾಡಿಯಾಗಿದ್ದ ಹಡಪದ ಅಪ್ಪಣ್ಣನವರು ವಚನ ಸಾಹಿತ್ಯಕ್ಕೆ ನೀಡಿದ ಕೊಡುಗೆ ಅಪಾರ. ಅವರ ತಪೋಭೂಮಿಯಾದ ಈ ಗವಿಯಲ್ಲಿ ಅವರ ಸ್ಮರಣಾರ್ಥ ಮೂರ್ತಿ ಇರುವುದು ಸಾಂಸ್ಕೃತಿಕವಾಗಿ ಮತ್ತು ಭಾವನಾತ್ಮಕವಾಗಿ ಅತ್ಯಂತ. ಅವಶ್ಯಕವಾಗಿದೆ. ಎಂದು ತಿಳಿಸಿದರು, ಈ ಸಂಧರ್ಭದಲ್ಲಿ ಜಿಲ್ಲಾಧ್ಯಕ್ಷರಾದ 2ನೇಪುಟಕ್ಕೆ

ಮೊದಲನೇ ಪುಟದಿಂದ

# ಏಪ್ರಿಲ್ 7ರಂದು ಬಸವಕಲ್ಯಾಣ ದಲ್ಲಿ ಇರುವ ಬಿ.ಕೆ.ಡಿ.ಬಿ ಆಯುಕ್ತರ ವಿರುದ್ಧ ಬೃಹತ್ ಹೋರಾಟ

ದತ್ತಾತ್ರೇಯ ಹಡಪದ ಬಾಂಥೆಕರ್. ಮತ್ತು ಪ್ರಧಾನ ಕಾರ್ಯದರ್ಶಿ ಸುಭಾಷ್ ಅಣದೂರ. ಬಸವಕಲ್ಯಾಣ ತಾಲೂಕಾಧ್ಯಕ್ಷ ರಾಚ್ಚಪ್ಪ ಮಂತಾಳ. ಮತ್ತು ರಾಮಲಿಂಗ ಹಡಪದ. ದತ್ತಾತ್ರೇಯ ಮೂಲಗೆ. ಪಾಂಡುರಂಗ ಗದಲೆಗಾಂವ್. ಜಗದೀಶ್ ನೆಲವಾಡಕರ್. ರಾಮಣ್ಣ ಹಡಪದ. ಉದಯಕುಮಾರ್ ರಾಜೇಶ್ವರ. ದಯಾನಂದ ಹಡಪದ ಬಗದುರಿ, ಅಂಬ್ರುತ್ ಹಡಪದ ಮುಡಬಿ. ಚಿದಾನಂದ ಹಡಪದ ಮಂತಾಳ. ಶಾಂತಕುಮಾರ ಹಡಪದ ಹಿರೇನಾಗಾವಿ. ಬೀದರ ಜಿಲ್ಲೆಯ ಹಿರಿಯ ಸಮಾಜದ ಮುಖಂಡರು ಶರಣಪ್ಪ ಚಂದನಹಳ್ಳಿ. ಪ್ರಭುರಾವ್ ತರನಹಳ್ಳಿ. ಹಣಮಂತ ಹುಣಜಿ.ವೈಜನಾಥ ತಾಳಮಂಡಗಿ .ಶರಣು ತಂಡೋಳಾ. ಮತ್ತು ಇದೇ ಸಮಯದಲ್ಲಿ ಕಲಬುರಗಿ ಜಿಲ್ಲಾಧ್ಯಕ್ಷರು ಈರಣ್ಣ ಸಿ ಹಡಪದ ಸಣ್ಣೂರ . ಬಸವರಾಜ ಹಡಪದ ಸುಗೂರ ಎನ್.ಮತ್ತು ರಮೇಶ್ ಹಡಪದ ನೀಲೂರ. ಭಗವಂತ ಹಡಪದ ಹೊನ್ನಕಿರಣಗಿ.ರುದ್ರಮಣಿ ಅಪ್ಪಣ್ಣ ಬಟಗೇರಾ. ಮಲ್ಲಿಕಾರ್ಜುನ ಹಡಪದ ಸಾವಳಗಿ. ತಿಪ್ಪಣ ಹಡಪದ ನರಿಬೋಳ. ಬಸವರಾಜ ಹಡಪದ ಹಳ್ಳಿ ಶಹಾಬಾದ, ಚಂದ್ರಶೇಖರ ಹಡಪದ ತೊನಸನಹಳ್ಳಿ. ಹಾಗೂ ರಾಜಕುಮಾರ ಹಡಪದ ಚಿಟ್ಟಗುಪ್ಪಾ. ವೀರಭದ್ರಪ್ಪ ಹಡಪದ ಹುಮನಾಬಾದ. ಸೇರಿದಂತೆ ಕ.ಜಿಲ್ಲಾ ಸಂ.ಕಾರ್ಯದರ್ಶಿ ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಸಮಾಜದ ಸೇವಕರು ಉಪಸ್ಥಿತರಿದ್ದರು ಎಂದು ವರದಿ ಯಾಗಿದೆ

# ಪೀಡಿಯಾಟ್ರಿಕ್ ರೇಡಿಯಾಲಜಿ ಕುರಿತ ಸಿಎಮ್ಇ ಕಾರ್ಯಕ್ರಮ




**ಕಲಬುರಗಿ:ಏ.6:** ಎಂ. ಆರ್. ಮೆಡಿಕಲ್ ಕಾಲೇಜಿನ ರೇಡಿಯೋಡಯಾಗ್ನೋಸಿಸ್ ವಿಭಾಗವು ಕಲಬುರಗಿ ರೇಡಿಯಾಲಜಿ ಅಸೋಸಿಯೇಷನ್ ಹಾಗೂ ಇಂಡಿಯನ್ ಸೊಸೈಟಿ ಆಫ್ ಪೀಡಿಯಾಟ್ರಿಕ್ ರೇಡಿಯಾಲಜಿ ಸಹಯೋಗದಲ್ಲಿ ಬಸವೇಶ್ವರ ಆಸ್ಪತ್ರೆ ಸಭಾಂಗಣದಲ್ಲಿ ಪೀಡಿಯಾಟ್ರಿಕ್ ರೇಡಿಯಾಲಜಿ ವಿಷಯದ ಕುರಿತ ನಿರಂತರ ವೈದ್ಯಕೀಯ ಶಿಕ್ಷಣ (ಸಿಎಂಇ) ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿತು.

ಈ ಕಾರ್ಯಕ್ರಮವನ್ನು ಎಚ್‌ಕೆಇ ಸೊಸೈಟಿ ಆಡಳಿತ ಮಂಡಳಿ ಸದಸ್ಯರಾದ ಡಾ. ಎಸ್. ಆರ್. ಹರ್ವಾಲ್ ಹಾಗೂ ಡಾ. ಕಿರಣ್ ದೇಶಮುಖ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಎಂಆರ್‌ಎಂಸಿ ಡೀನ್ ಡಾ. ಶರಣಗೌಡ ಪಾಟೀಲ ಹಾಗೂ ಬಿಟಿಜಿಎಚ್ ವೈದ್ಯಕೀಯ ಅಧೀಕ್ಷಕರಾದ ಡಾ. ಎಂ. ಎಸ್. ತೆಗನೂರು ಉಪಸ್ಥಿತರಿದ್ದರು.

ಪ್ರಖ್ಯಾತ ಅತಿಥಿ ವಕ್ತಾರರಾದ ಡಾ. ಶ್ರೀಧರ್ ಹಾಗೂ ಡಾ. ಗ್ರೆಸಿಲ್ಲಾ ಜೋಶಿ ಅವರು ಪೀಡಿಯಾಟ್ರಿಕ್ ಇಮೇಜಿಂಗ್ ಕ್ಷೇತ್ರದ ನವೀನತೆಗಳು ಮತ್ತು ಉತ್ತಮ ಕಾರ್ಯಪದ್ಧತಿಗಳ ಕುರಿತು ಉಪನ್ಯಾಸ ನೀಡಿದರು.

ಈ ಸಿಎಮ್ಇ ಕಾರ್ಯಕ್ರಮವನ್ನು ಆಯೋಜನಾ ಅಧ್ಯಕ್ಷರಾದ

ಡಾ.ಚೆತನ ದುರ್ಗಿ ಮತ್ತು ಕಾರ್ಯದರ್ಶಿಯಾದ ಡಾ. ಶಿವಾನಂದ ಮೆಲಕುಂಡಿ ಅವರ ನೇತೃತ್ವದಲ್ಲಿ, ರೇಡಿಯಾಲಜಿ ವಿಭಾಗದ ಸಿಬ್ಬಂದಿ ಹಾಗೂ ಕಲಬುರಗಿ ರೇಡಿಯಾಲಜಿ ಅಸೋಸಿಯೇಷನ್ ಸದಸ್ಯರ ಸಹಕಾರದಿಂದ ಯಶಸ್ವಿಯಾಗಿ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಅನೇಕ ವೈದ್ಯರು ಭಾಗವಹಿಸಿ, ಜ್ಞಾನ ಹಂಚಿಕೆ ಮತ್ತು ಶೈಕ್ಷಣಿಕ ಚರ್ಚೆಗೆ ಉತ್ತಮ ವೇದಿಕೆಯಾಯಿತು. ಪೀಡಿಯಾಟ್ರಿಕ್ ರೋಗಿಗಳ ಉತ್ತಮ ಚಿಕಿತ್ಸಾ ಫಲಿತಾಂಶಗಳಿಗಾಗಿ ನಿರಂತರ ಅಧ್ಯಯನ ಮತ್ತು ನವೀನತೆಯ ಮಹತ್ವವನ್ನು ಈ ಕಾರ್ಯಕ್ರಮ ಒತ್ತಿಹೇಳಿತು.

# ದೇಶ ಕಂಡ ಅಪ್ರತಿಮ ನಾಯಕ ಬಾಬು ಜಗಜೀವನ್ ರಾಮ್

**ಬೆಳಗಾವಿ, ಏ.6:** ಇತಿಹಾಸ ಮಹಾನ್ ವ್ಯಕ್ತಿಗಳನ್ನ ನೇಮಿಸುತ್ತದೆ ಆದರೆ ಸಮಯ ಕೆಲವೇ ಕೆಲವು ವ್ಯಕ್ತಿಗಳನ್ನು ನೆನಪಿಸುತ್ತದೆ. ಅಂತಹವರಲ್ಲಿ ಡಾ. ಬಾಬು ಜಗಜೀವನ್ ರಾಮ್ ಒಬ್ಬರು ಎಂದು ಸಂಜೀವ ಕೆ ತಳವಾರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆಯ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನ್ ರಾಮ್ ಉದ್ಯಾನವನದಲ್ಲಿ ನಡೆದ ಹಸಿರುಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಜಯಂತಿ; ಉತ್ಸವ-2026ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಸಮಾನತೆ ಸಮಾಜದ ಅಡಿಪಾಯ ಎಂದು ಹೇಳಿ ಅದಕ್ಕೆ ಶ್ರಮಿಸಿ, ಕಾರ್ಮಿಕರ ಹಿತವೇ ದೇಶದ ಹಿತ ಎಂದು ಹೇಳಿದರು. ಆಹಾರ ಭದ್ರತೆ ದೇಶದ ಭದ್ರತೆ ಎಂದು ಸಂದೇಶ ನೀಡಿ ಹಗಲಿರುಳು ದುಡಿದ ದಿಮಂತ ನಾಯಕ ಡಾ. ಬಾಬು ಜಗಜೀವನ್ ರಾಮ್ ಎಂದು ಹೇಳಿದರು.

ಸಂವಿಧಾನ ಸರಿಯಾದ ರೀತಿಯಲ್ಲಿ ಜಾರಿಯಾಗಬೇಕು, ಸಂದರ್ಭಗಳಿಂದ ಸೋಲದೆ ಆ ಸಮಯವನ್ನೇ ನಿಮ್ಮ ಅವಕಾಶವಾಗಿ ಮಾಡಿಕೊಳ್ಳಿ ಎಂದು ಎಲ್ಲ ಜನರಿಗೆ ತಿಳಿ ಹೇಳಿದ ಡಾ.ಬಾಬು ಜಗಜೀವನ್ ರಾಮ ಅವರ ಜೀವನ, ಆದರ್ಶಗಳನ್ನು ಎಲ್ಲರೂ ಅರಿತುಕೊಳ್ಳಲು ಸಂಜೀವ ಕೆ ತಳವಾರ ಅವರು ಕರೇ ನೀಡಿದರು.

ಪೊಲೀಸ್ ಆಯುಕ್ತರಾದ ಭೂಷಣ್ ಗುಲಾಬರಾವ್ ಬೊರಸೆ ಅವರು ಮಾತನಾಡಿ, ಜಗಜೀವನ ರಾಮ್ ಎಲ್ಲಾ ಯುವಕರಿಗೆ ಸ್ಪೂರ್ತಿಯಾಗಲಿ ಎಲ್ಲರೂ ನನ್ನವರು, ಸಮಾನತೆ, ಸಮಭಾವ ಎಂಬ ಭಾವನೆ ಇಂದ ನಾವು ಬದುಕಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್, ಮಾತನಾಡಿ, ದೇಶ ಕಂಡ ಅಪ್ರತಿಮ ನಾಯಕರಲ್ಲಿ ಜಗಜೀವನ್ ರಾಮ್ ಅವರು ಒಬ್ಬರು, ಕಾರ್ಮಿಕರಿಗೆ ಅನೇಕ ಕಾನೂನು ಗಳನ್ನೂ ಜಾರಿಗೆ ತಂದರು, ಸಮಸ್ಯೆ ಹೇಳುವರು ನಾಯಕರಲ್ಲ ಸಮಸ್ಯೆಗಳನ್ನು ಪರಿಹರಿಸುವ ವ್ಯಕ್ತಿಗಳು ನಾಯಕರಾಗುತ್ತಾರೆ.



ಬಾಬು ಜಗಜೀವನ ರಾಮ್ ಟಾಸ್ಕ್ ಮಾಸ್ಟರ್ ದೇಶದ ಪ್ರತಿ ಸಮಸ್ಯೆ ಪರಿಹರಿಸುವರಲ್ಲಿ ನಿಂತವರು, ಆಹಾರದ ಕೊರತೆಯನ್ನು ಹೋಗಲಾಡಿಸಿ ಬೇರೆ ದೇಶಗಳಿಗೆ ರಫ್ತು ಮಾಡುವಷ್ಟು ಬೆಳೆಸಿರುವುದಕ್ಕೆ ಕಾರಣ ಬಾಬುಜಿ ಯವರು, ದೇಶ ಕಷ್ಟದಲ್ಲಿ ಇದಾಗ ಗಟ್ಟಿಯಾಗಿ ನಿಂತವರು ಬಾಬುಜಿ ಅವರು, ಎಂದು ಹೇಳಿದರು. ಬೆಳಗಾವಿ ಉಪ ವಿಭಾಗಾಧಿಕಾರಿ ಶ್ರವಣ್ ನಾಯಕ್ ಅವರು ಮಾತನಾಡಿ, ಆಡಳಿತ ಎಂದರೆ ಅಧಿಕಾರ ಬಯಸುವುದಲ್ಲ ಅದರಿಂದ ಎಷ್ಟು ಜನರಿಗೆ ಅನುಕೂಲ ಮಾಡಿದ್ದೀವಿ ಎಂಬುದು ಮುಖ್ಯ; ಜಗಜೀವನ ರಾಮ್ ಅವರ ಜೀವನವು ಸಾಮಾಜಿಕ ವ್ಯವಸ್ಥೆಗೆ ಅಡಿಪಾಯ ಅವರ ವಿಚಾರಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಪರಶುರಾಮ ವಗ್ಗನವರು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ಚನ್ನಯ್ಯನವರ, ಕರ್ನಾಟಕ ನೌಕರ ಸಂಘದ ಅಧ್ಯಕ್ಷ ರಾಯಪ್ಪಗೋಳ, ಕ್ರೀಡಾ ಇಲಾಖೆಯ ಉಪ ನಿರ್ದೇಶಕರು, ಸಮಾಜದ ಮುಖಂಡರಾದ ಭೀಮರಾವ್ ಪವಾರ್, ಮಲ್ಲೇಶ ಚೌಗಲಾ, ಮಹಾದೇವ ತಳವಾರ, ಭಾವಕಣ್ಣ ಭಂಗ್ಯಾಗೋಳ, ಸಿದ್ರಾಯಿ ಮೇತ್ರಿ, ಲಕ್ಷ್ಮಣ್ ಲಗಮಪ್ಪಗೋಳ, ಬಸವರಾಜ ಅರವಳ್ಳಿ, ಮಹಾದೇವ ಪೊಲ್, ಬಸವರಾಜ ರಾಯವಾಗೋಲ್, ಸುಧೀರ ಚೌಗಲೆ, ಸಂದೀಪ ಕೋಲಕಾರ, ಹಿರಲಾಳ ಚೌಹಾಣ್, ಜೀವನ್ ಕುರಾನೆ, ಸಾರ್ವಜನಿಕರು ಉಪಸ್ಥಿತರಿದ್ದರು.

# ಅಮೆರಿಕಕ್ಕೆ ಇರಾನ್ ಸಡ್ಡು

**ವಾಷಿಂಗ್ಟನ್,ಏ.6–** ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ 48 ಗಂಟೆಯೊಳಗೆ ಹಾರ್ಮುಜ್ ಜಲಸಂಧಿ ಮುಕ್ತಗೊಳಿಸದಿದ್ದರೆ ಇರಾನ್‌ನ ಇಂಧನ ಮತ್ತು ಪರಮಾಣು ಮೂಲ ಸೌಕರ್ಯದ ಮೇಲೆ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ ಬೆನ್ನಲ್ಲೇ, ತಮ್ಮ ತಂಟೆಗೆ ಬಂದರೆ ಮತ್ತೊಂದು ಪ್ರಮುಖ ಜಲಮಾರ್ಗ "ಬಾಬ್ ಅಲ್-ಮಂದೇಬ್" ಅನ್ನು ಮುಚ್ಚಲು ಹಿಂಜರಿಯುವುದಿಲ್ಲ ಎಂದು ಇರಾನ್ ತಿರುಗೇಟು ನೀಡಿದೆ.

ಬಾಬ್ ಅಲ್-ಮಂದೇಬ್ ಜಲಮಾರ್ಗ, ಕೆಂಪು ಸಮುದ್ರವನ್ನು ಅಡೆನ್ ಕೊಲ್ಲಿಗೆ ಸಂಪರ್ಕಿಸುವ ಪ್ರಮುಖ ಜಾಗತಿಕ ಹಡಗು ಸಾಗಣೆ ಚಾಕ್‌ಪಾಯಿಂಟ್ ಆಗಿದ್ದು, ಲಕ್ಷಾಂತರ ಬ್ಯಾರೆಲ್‌ಗಳ ತೈಲ ಮತ್ತು ಪ್ರಮುಖ ಸರಕುಗಳು ಪ್ರತಿದಿನ ಸಾಗಣೆಯಾಗುವ ತಾಣವಾಗಿದೆ.

ಈಗ ಈ ಜಲಸಂಧಿಯನ್ನು ಇರಾನ್ ಮುಚ್ಚುವುದಾಗಿ ಬೆದರಿಕೆ ಹಾಕಿದ್ದು, ಒಂದು ವೇಳೆ ಮುಚ್ಚಿದರೆ ಜಾಗತಿಕವಾಗಿ ಕಚ್ಚಾತೈಲ ಪೂರೈಕೆಯ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎನ್ನಲಾಗಿದೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೂರ್ಖತನದ ತಪ್ಪುಗಳಿಗೆ ಮುಂದಿನ ದಿನಗಳಲ್ಲಿ ಬಾರಿ ಬೆಲೆ ತೆರಬೇಕಾಗುತ್ತದೆ. ಇರಾನ್ ಮೇಲೆ ಮತ್ತೊಮ್ಮೆ ಬೆದರಿಕೆ ಹಾಕಿದರೆ ಮತ್ತೊಂದು ಪ್ರಮುಖ ಜಲಮಾರ್ಗ "ಬಾಬ್ ಅಲ್-ಮಂದೇಬ್" ಮುಚ್ಚಬೇಕಾಗುತ್ತದೆ ಎಂದು ಇರಾನ್ ನೇರವಾಗಿಯೇ ಅಮೆರಿಕಕ್ಕೆ ಎಚ್ಚರಿಕೆ ನೀಡಿದೆ.

ಈ ಕುರಿತು ಮಾಹಿತಿ ನೀಡಿರುವ ಇರಾನ್ ಸುಪ್ರೀಂ ನಾಯಕ ಮೊಜ್ತಾಬಾ ಖಮೇನಿ ಅವರ ಇರಾನಿನ ಸಲಹೆಗಾರ ಈ ಎಚ್ಚರಿಕೆ ನೀಡಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮುಚ್ಚಿರುವ ಹಿನ್ನೆಲೆಯಲ್ಲಿ ಜಗತ್ತಿನ ಪ್ರಮುಖ ಕಚ್ಚಾತೈಲ ಪೂರೈಕೆಯಲ್ಲಿ ಬಾರಿ ವ್ಯತ್ಯಯವಾಗಿರುವ ಹಿನ್ನೆಲೆಯಲ್ಲಿ ಮತ್ತೊಂದು ಜಲಮಾರ್ಗ ಮುಚ್ಚಲು ಹಿಂಜರಿಯುವುದಿಲ್ಲ ಎಂದು ಅಮೆರಿಕಕ್ಕೆ ನೇರವಾಗಿಯೇ ಇರಾನ್ ಎಚ್ಚರಿಕೆ ನೀಡಿದ್ದು ಅಮೆರಿಕ ಯಾವ ನಿಲುವು ತೆಗೆದುಕೊಳ್ಳಲಿದೆ ಎನ್ನುವುದು ಕುತೂಹಲ ಮೂಡಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹಾರ್ಮುಜ್ ಜಲಸಂಧಿಯನ್ನು 48 ಗಂಟೆಗಳ ಒಳಗೆ ತೆರೆಯಬೇಕು ಇಲ್ಲದಿದ್ದರೆ ಪರಿಣಾಮ ಎದುರಿಸಬೇಕಾಗುತ್ತಿದೆ. ಜಾಗತಿಕ ಮಾರುಕಟ್ಟೆಗಳು ಮತ್ತಷ್ಟು ಪೂರೈಕೆ ಅಡಚಣೆಗಳಿಗೆ ಸಿದ್ಧವಾಗುತ್ತಿರುವಾಗ ಇರಾನ್‌ನಿಂದ ಬೆದರಿಕೆ ಬಂದಿದೆ.

ಫೆಬ್ರವರಿ 28 ರಂದು ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ದಾಳಿ ನಡೆಸುವ ಮೂಲಕ ಇರಾನ್ ಸರ್ವೋಚ್ಚ ನಾಯಕ ಆಯಾತೊಲ್ಲ ಆಲಿ ಖಮೇನಿ ಸೇರಿದಂತೆ ಅವರ ಕುಟುಂಬದ ಸದಸ್ಯರು ಮತ್ತು ಇರಾನ್ ಸರ್ಕಾರದ ಪ್ರಮುಖರನ್ನು ಹತ್ಯೆ ಮಾಡಿತ್ತು. ಇದರ ಬೆನ್ನಲ್ಲೇ ದಿನದಿಂದ ದಿನಕ್ಕೆ ಯುದ್ಧ ಮತ್ತಷ್ಟು ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ.

**ನಷ್ಟ ಪರಿಹಾರವಿಲ್ಲದೆ ಹಾರ್ಮುಜ್ ತೆರೆಯಲ್ಲ:** ವಿಶ್ವದ ದೊಡ್ಡಣ್ಣ ಟ್ರಂಪ್ ಡೆಡ್‌ಲೈನ್‌ಗೆ ಇರಾನ್ ಕೂಡ ತನ್ನದೇ ದಾಟಿಯಲ್ಲಿ ಕೌಂಟರ್ ನೀಡಿದೆ. ಯುದ್ಧದಿಂದಾಗಿರುವ ನಷ್ಟ ಪರಿಹಾರವಿಲ್ಲದೇ ಹಾರ್ಮುಜ್ ಜಲಸಂಧಿ ತೆರೆಯುವ ಮಾತಿಲ್ಲ ಎಂದು ಅಮೆರಿಕಗೆ ಇರಾನ್ ಹೊಸ ಷರತ್ತು ಹಾಕಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ ಹೊಸ ಬೆದರಿಕೆ ಹಾಕಿದ್ದು, ಒಪ್ಪಂದಕ್ಕೆ ಬನ್ನಿ ಅಥವಾ ಶರಣಾಗಿ. ಇಲ್ಲವಾದಲ್ಲಿ ಇಂದು ರಾತ್ರಿ 8 ಗಂಟೆಗೆ ಮಾರಕ ದಾಳಿ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಆದರೆ ಇರಾನ್ ಹಿಂದೆ ಸರಿಯಲು ಸಿದ್ಧವಿಲ್ಲ. ಯುದ್ಧದಿಂದಾಗಿರುವ ನಷ್ಟ ತುಂಬಿಕೊಡುವಂತೆ ಷರತ್ತು ವಿಧಿಸುವ ಮೂಲಕ ಟ್ರಂಪ್ ನರಕ ದರ್ಶನದ ಎಚ್ಚರಿಕೆಗೆ ಇರಾನ್ ಪ್ರತ್ಯುತ್ತರ ನೀಡಿದೆ. ಭಾನುವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೆ 48 ಗಂಟೆಗಳ ಹೊಸ ಗಡುವು ನೀಡಿದ್ದು, ಮಂಗಳವಾರ ಮುಗಿಯಲಿದೆ. ಈ ನಡುವೆ ಹುಚ್ಚರೇ, ಜಲಸಂಧಿಯನ್ನು ತೆರೆಯಿರಿ, ಇಲ್ಲದಿದ್ದರೆ ನೀವು ನರಕಕ್ಕೆ ಹೋಗುತ್ತೀರಿ ಎಂದು ಕಟು ಪದಗಳಲ್ಲಿ ಇರಾನ್ ನಾಯಕರನ್ನು ಟ್ರಂಪ್ ಎಚ್ಚರಿಸಿದ್ದಾರೆ. ಅಲ್ಲದೇ ಇಂದು ಟ್ರಂಪ್ ಸಾರ್ವಜನಿಕ ಭಾಷಣ ಮಾಡಲಿದ್ದು, ಇರಾನ್‌ಗೆ ಕಡೆಯ ಎಚ್ಚರಿಕೆ ನೀಡುವ ಸಾಧ್ಯತೆ ಇದೆ.





ಭಾನುವಾರ ಟ್ರೂಥ್ ಸೋಶಿಯಲ್ ಪೋಸ್ಟ್ ಮಾಡಿರುವ ಟ್ರಂಪ್, ಟೆಹ್ರಾನ್ ಹಾರ್ಮುಜ್ ಜಲಸಂಧಿಯನ್ನು ತೆರೆಯದಿದ್ದರೆ, ಅಮೆರಿಕವು ಅದರ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳ ಮೇಲೆ ದಾಳಿ ಮಾಡಬಹುದು ಮತ್ತು ಅದು ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಇರಾನ್‌ಗೆ ಎಚ್ಚರಿಕೆ ನೀಡಿದ್ದಾರೆ.

ಈ ಎಚ್ಚರಿಕೆಗಳ ನಡುವೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಮೆರಿಕ ಕಾಲಮಾನದ ಪ್ರಕಾರ ಮಧ್ಯಾಹ್ನ 1 ಗಂಟೆಗೆ ಎಫ್ - 15 ಇ ಸಿಬ್ಬಂದಿಯನ್ನು ರಕ್ಷಿಸುವ ಕುರಿತು ಮಾತನಾಡುವುದಾಗಿ ಹೇಳಿದ್ದಾರೆ. ಅಲ್ಲದೇ ಹಾರ್ಮುಜ್ ಜಲಸಂಧಿ ನಿಯಂತ್ರಣ ಹಾಗೂ ಕದನ ವಿರಾಮದ ನಂತರದ ದಾಳಿಯ ಬಗ್ಗೆ ಸುಳಿವು ನೀಡಲಿದ್ದಾರೆ.

ಮುಂದುವರಿದ ದಾಳಿ-ಪ್ರತಿದಾಳಿ:
ಈ ಮಧ್ಯೆ, ದಕ್ಷಿಣ ಇಸ್ರೇಲ್‌ನ ಡಿಮೋನಾ ಪ್ರದೇಶದ ಬಳಿಯ ಪೆಟ್ರೋಕೆಮಿಕಲ್ ಸೌಲಭ್ಯಗಳನ್ನು ಗುರಿಯಾಗಿಸಿಕೊಂಡು ಇರಾನ್ ದಾಳಿ ನಡೆಸಿದೆ. ಡಿಮೋನಾ ಇಸ್ರೇಲ್‌ನ ಪ್ರಮುಖ ಪರಮಾಣು ಸೌಲಭ್ಯದ ಸ್ಥಳವಾಗಿದೆ. ಇದರ ಜತೆಗೆ ಕುವೈತ್‌ನ ಬುಬಿಯಾನ್ ದ್ವೀಪದಲ್ಲಿರುವ ಅಮೆರಿಕ ಮಿಲಿಟರಿ ನೆಲೆಗಳನ್ನು ಡ್ರೋನ್‌ಗಳ ಮೂಲಕ ಗುರಿಯಾಗಿಸಿಕೊಂಡಿರುವುದಾಗಿ ಇರಾನ್ ಹೇಳಿದೆ.

ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ಪೆಟ್ರೋಕೆಮಿಕಲ್ ಸ್ಥಾವರದ ಮೇಲೆ ದಾಳಿ ನಡೆದ ನಂತರ ಬೆಂಕಿ ಕಾಣಿಸಿಕೊಂಡಿದೆ. ಬೊರೂಜ್ ಸ್ಥಾವರದಲ್ಲಿ ತಡೆಹಿಡಿಯುವ ಸಮಯದಲ್ಲಿ ಅವಶೇಷಗಳು ಬಿದ್ದಿದ್ದರಿಂದ ಬೆಂಕಿ ಕಾಣಿಸಿಕೊಂಡಿದೆ ಎಂದು ಅಬುಧಾಬಿ ಅಧಿಕಾರಿಗಳು ತಿಳಿಸಿದ್ದಾರೆ. ಅಬುಧಾಬಿ ಮಾಧ್ಯಮ ಕಚೇರಿಯ ಪ್ರಕಾರ, ಹಾನಿಯನ್ನು ನಿರ್ಣಯಿಸುವವರೆಗೆ ಸ್ಥಾವರದಲ್ಲಿನ ಕಾರ್ಯಾಚರಣೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಲಾಗಿದೆ. ಅದೃಷ್ಟವಶಾತ್, ಇಲ್ಲಿಯವರೆಗೆ ಯಾವುದೇ ಗಾಯಗಳು ವರದಿಯಾಗಿಲ್ಲ.
ನೈಋತ್ಯ ಇರಾನ್‌ನ ವಿಮಾನ ನಿಲ್ದಾಣದ ಮೇಲೆ ಅಮೆರಿಕ-ಇಸ್ರೇಲ್ ದಾಳಿಗಳು ನಡೆದಿವೆ. ಇಸ್ರೇಲ್ ಗಡಿಯಿಂದ ದೂರದಲ್ಲಿರುವ ದಕ್ಷಿಣ ಲೆಬನಾನ್‌ನ ಕ್ಫರ್ ಹಟ್ಟಾ ಮೇಲೆ ಭಾನುವಾರ ಇಸ್ರೇಲಿ ಪಡೆಗಳು ನಡೆಸಿದ ದಾಳಿಯಲ್ಲಿ ಆರು ಜನರ ಕುಟುಂಬ ಸೇರಿದಂತೆ ಏಳು ಜನರು ಸಾವನ್ನಪ್ಪಿದ್ದಾರೆ.

ಅಮೆರಿಕದ ದಾಳಿಗಳ ಬಗ್ಗೆ ಇರಾನ್ ಆಕ್ಷೇಪ ವ್ಯಕ್ತಪಡಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಾಗರಿಕ ಮೂಲಸೌಕರ್ಯಕ್ಕೆ ಬಹಿರಂಗವಾಗಿ ಬೆದರಿಕೆ ಹಾಕುತ್ತಿದ್ದಾರೆ ಎಂದು ಇರಾನ್ ಆರೋಪಿಸಿದೆ. ಅವರ ಹೇಳಿಕೆಗಳು ನಾಗರಿಕರನ್ನು ಭಯಭೀತಗೊಳಿಸಲು ನೇರ ಮತ್ತು ಸಾರ್ವಜನಿಕ ಪ್ರಚೋದನೆ ಮತ್ತು ಯುದ್ಧ ಅಪರಾಧ ಮಾಡುವ ಉದ್ದೇಶದ ಪುರಾವೆಯಾಗಿದೆ ಎಂದು ಆರೋಪಿಸಿದೆ.ಒಟ್ಟಾರೆ ಡೊನಾಲ್ಡ್ ಟ್ರಂಪ್ ಅವರ ಮಾತುಗಳ ಮೇಲೆ ಯುದ್ಧ ನಿರ್ಣಾಯಕವಾಗಲಿದ್ದು, ಮುಂಬರುವ ದಾಳಿಗಳ ಬಗ್ಗೆ ಸುಳಿವುಗಳು ಸಿಗಲಿದೆ.

ಸಮಯ ಮೀರುತ್ತಿದೆ:ಟ್ರಂಪ್
ಇರಾನ್, ಅಮೆರಿಕ ಜೊತೆ ಒಪ್ಪಂದ ಮಾಡಿಕೊಳ್ಳಲು ಇದು ಸಕಾಲ, ಈಗಾಗಲೇ ಸಮಯ ಮೀರುತ್ತಿದೆ ಎಂದು ಅಮೇರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ.
ಹಾರ್ಮುಜ್ ಜಲಸಂಧಿ ಮತ್ತೆ ಆರಂಭಿಸಲು ಇರಾನ್‌ಗೆ 24 ಗಂಟೆಗಳ ಕಾಲ ಗಡುವು ವಿಸ್ತರಿಸಿದ್ದಾರೆ, ಇರಾನ್ ಹಾರ್ಮುಜ್ ಜಲಸಂಧಿ ಮತ್ತೆ ತೆರೆಯದಿದ್ದರೆ ತೀವ್ರ ಪರಿಣಾಮಗಳಿಗೆ ಹೊಣೆಯಾಗಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.
ಇರಾನ್ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳ ಮೇಲೆ ಸಂಭವನೀಯ ಅಮೆರಿಕದ ದಾಳಿ ನಡೆಯಲಿದ್ದು ಇರಾನ್‌ಗೆ ನರಕ ತೋರಿಸುತ್ತೇವೆ ಎಂದಿದ್ದಾರೆ.

## ಸುರಕ್ಷತಾ ಸೂಚನೆ ಪಾಲಿಸಿ: ಸಾರ್ವಜನಿಕರಿಗೆ ಯುಎಇ ಕರೆ

**ಅಬುಧಾಬಿ,ಏ.6:–** ದೇಶದ ವಾಯು ರಕ್ಷಣಾ ವ್ಯವಸ್ಥೆಯು ಕ್ಷಿಪಣಿಗಳು ಮತ್ತು ಮಾನವರಹಿತ ವೈಮಾನಿಕ ವಾಹನಗಳನ್ನು ಸಕ್ರಿಯವಾಗಿ ಎದುರಿಸುತ್ತಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಸಾರ್ವಜನಿಕರು ಶಾಂತವಾಗಿರಲು ಮತ್ತು ಸುರಕ್ಷತಾ ಸೂಚನೆಗಳನ್ನು ಅನುಸರಿಸಲು ಸಚಿವಾಲಯು ಕರೆ ನೀಡಿದೆ.ಯುಎಇ ವಾಯು ರಕ್ಷಣಾ ವ್ಯವಸ್ಥೆಯು ಕ್ಷಿಪಣಿ ಮತ್ತು ಯುಎವಿ ದಾಳಿಗಳಿಗೆ ಸಕ್ರಿಯವಾಗಿ ಪ್ರತಿಕ್ರಿಯಿಸುತ್ತಿದೆ.

ದೇಶಾದ್ಯಂತ ಕೇಳಿಬರುತ್ತಿರುವ ಶಬ್ದಗಳು ಕ್ಷಿಪಣಿಗಳು ಮತ್ತು ಯುಎವಿ ಗಳ ವಿರುದ್ಧ ಯುಎಇ ವಾಯು ರಕ್ಷಣಾ ವ್ಯವಸ್ಥೆಯ ನಿರಂತರ ಕಾರ್ಯಾಚರಣೆಗಳ ಪರಿಣಾಮವಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.ಸಾರ್ವಜನಿಕರು ಶಾಂತವಾಗಿರಲು ಮತ್ತು ಸಂಬಂಧಿತ ಅಧಿಕಾರಿಗಳು ನೀಡಿದ ಸುರಕ್ಷತಾ ಸೂಚನೆಗಳನ್ನು ಅನುಸರಿಸಲು ಯುಎಇ ಕರೆ ನೀಡಿದೆ.

ಯಶಸ್ವಿ ವಾಯು ಪ್ರತಿದಾಳಿಯಿಂದ ಉಳಿದಿರುವ ಯಾವುದೇ ಭಗ್ನಾವಶೇಷಗಳನ್ನು ಸಮೀಪಿಸಬೇಡಿ, ಮುಟ್ಟಬೇಡಿ ಅಥವಾ ಛಾಯಾಚಿತ್ರ ತೆಗೆಯಬೇಡಿ. ಸಂಬಂಧಿತ ಅಧಿಕಾರಿಗಳು ಪರಿಸ್ಥಿತಿಯನ್ನು ನಿರ್ಣಯಿಸಲಿ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.ಯುಎಇ ವಾಯು ರಕ್ಷಣಾ ಪಡೆಗಳು ಪ್ರಸ್ತುತ ಇರಾನ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳಿಗೆ ಪ್ರತಿಕ್ರಿಯಿಸುತ್ತಿವೆ. ದೇಶದ ವಿವಿಧ ಭಾಗಗಳಲ್ಲಿ ಕೇಳಿಬರುತ್ತಿರುವ ಶಬ್ದಗಳು ಯುನೈಟೆಡ್ ಅರಬ್ ಎಮಿರೇಜ್‌ನ ವಾಯು ರಕ್ಷಣಾ ವ್ಯವಸ್ಥೆಗಳು ಬ್ಯಾಲಿಸ್ಟಿಕ್ ಕ್ಷಿಪಣಿಗಳು, ಕ್ರೂಸ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಹೊಡೆದುರುಳಿಸುವುದರಿಂದ ಉಂಟಾಗಿವೆ ಎಂದು ರಕ್ಷಣಾ ಸಚಿವಾಲಯ ದೃಢಪಡಿಸಿದೆ.

ಇದಲ್ಲದೆ, ದೇಶದ ವಾಯು ರಕ್ಷಣಾ ವ್ಯವಸ್ಥೆಗಳು ಶತ್ರು ಕ್ಷಿಪಣಿ ಮತ್ತು ಡ್ರೋನ್ ಬೆದರಿಕೆಗಳಿಗೆ ಪ್ರತಿಕ್ರಿಯಿಸಿವೆ ಎಂದು ಕುವೈತ್ ಮಿಲಿಟರಿ ಹೇಳಿದೆ."ಕುವೈತ್ ವಾಯು ರಕ್ಷಣಾ ಪಡೆ ಪ್ರಸ್ತುತ ಶತ್ರುಗಳ ಕ್ಷಿಪಣಿ ಮತ್ತು ಡ್ರೋನ್ ಬೆದರಿಕೆಗಳಿಗೆ ಪ್ರತಿಕ್ರಿಯಿಸುತ್ತಿದೆ. ಕುವೈತ್ ಸಶಸ್ತ್ರ ಪಡೆಗಳ ಜನರಲ್ ಸ್ಟಾಫ್, ದಾಳಿಗಳಿಗೆ ಪ್ರತಿಕ್ರಿಯಿಸುವ ವಾಯು ರಕ್ಷಣಾ ವ್ಯವಸ್ಥೆಗಳಿಂದ ಯಾವುದೇ ಸ್ಫೋಟಗಳು ಸಂಭವಿಸಿರಬಹುದು ಎಂದು ದೃಢಪಡಿಸಿದ್ದಾರೆ. ಸಂಬಂಧಿತ ಅಧಿಕಾರಿಗಳು ನೀಡಿದ ಸುರಕ್ಷತೆ ಮತ್ತು ಭದ್ರತಾ ಸೂಚನೆಗಳನ್ನು ಅನುಸರಿಸಲು ಸಾರ್ವಜನಿಕರನ್ನು ಕೋರಲಾಗಿದೆ" ಎಂದು ಸೇನೆ ಹೇಳಿಕೆಯಲ್ಲಿ ತಿಳಿಸಿದೆ.

ಇದಕ್ಕೂ ಮೊದಲು, ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಾಘ್ಯೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಗಳಿಗೆ ಪ್ರತಿಕ್ರಿಯೆಯಾಗಿ ಇರಾನ್ ತನ್ನ ಮೂಲಸೌಕರ್ಯದ ಮೇಲಿನ ಯಾವುದೇ ದಾಳಿಗೆ ಪ್ರತಿಕ್ರಿಯಿಸುತ್ತದೆ ಎಂದು ಎಚ್ಚರಿಸಿದ್ದಾರೆ ಎಂದು ಅಲ್ ಜಜೀರಾ ವರದಿ ಮಾಡಿದೆ.
"ಇರಾನಿನ ಮೂಲಸೌಕರ್ಯದ ಮೇಲೆ ದಾಳಿ ನಡೆದರೆ, ನಾವು ಅದೇ ರೀತಿ ಪ್ರತಿಕ್ರಿಯಿಸುತ್ತೇವೆ ಎಂದು ನಮ್ಮ ಸಶಸ್ತ್ರ ಪಡೆಗಳು ಸ್ಪಷ್ಟಪಡಿಸಿವೆ" ಎಂದು ಎಸ್ಮಾಯಿಲ್ ಬಾಘ್ಯೆ ಹೇಳಿದ್ದಾರೆ."ಯುನೈಟೆಡ್ ಸ್ಟೇಟ್ಸ್ ಒಡೆತನದ ಅಥವಾ ಯುನೈಟೆಡ್ ಸ್ಟೇಟ್‌ನೊಂದಿಗೆ ಸಂಬಂಧ ಹೊಂದಿರುವ ಮೂಲಸೌಕರ್ಯವನ್ನು ಯಾವುದೇ ರೀತಿಯಲ್ಲಿ ಅಥವಾ ಇರಾನ್ ವಿರುದ್ಧ ಗುರಿಯಾಗಿಸುವ ಯಾವುದೇ ಆಕ್ರಮಣಕಾರಿ ಕೃತ್ಯಕ್ಕೆ ನಮ್ಮ ಸಶಸ್ತ್ರ ಪಡೆಗಳು ಪ್ರತಿಕ್ರಿಯಿಸುತ್ತವೆ" ಎಂದು ಅವರು ಹೇಳಿದ್ದಾರೆ.

# ಜನಗಣತಿ ಯಶಸ್ವಿಗೊಳಿಸಲು ಸಾರ್ವಜನಿಕರಿಗೆ ಜಿಲ್ಲಾಧಿಕಾರಿ ಮನವಿ

**ವಿಜಯಪುರ, ಏ. 6:** ಜನಗಣತಿ–2027ರಡಿ ಮನೆಗಳ ಪಟ್ಟಿ ಮತ್ತು ಮನೆ ಗಣತಿಯನ್ನು ಏ. 16 ರಿಂದ ಮೇ 15ರವರೆಗೆ 30 ದಿನಗಳ ಕಾಲ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.



ಈಗಾಗಲೇ ಏ. 1ರಿಂದ ಸ್ವಯಂ ಗಣತಿಗೆ ಅಧಿಕೃತ ಚಾಲನೆ ಸಿಕ್ಕಿದ್ದು, ಏ. 15 ರವರೆಗೆ ಅವಕಾಶ ಕಲ್ಪಿಸಲಾಗಿದೆ ತಿಳಿಸಿದರು.
ಜನಗಣತಿಯು ಅತ್ಯಂತ ತಳಮಟ್ಟದ ಆಡಳಿತ ಘಟಕಗಳಿಗೆ, ಅಂದರೆ, ಗ್ರಾಮೀಣ ಪ್ರದೇಶದ ಹಳ್ಳಿಗಳು ಮತ್ತು ನಗರ ಪ್ರದೇಶಗಳಲ್ಲಿನ ಪಟ್ಟಣ, ವಾರ್ಡ್ ಗಳಿಗೆ ವಸತಿ ಸ್ಥಿತಿ, ಸೌಲಭ್ಯಗಳು ಮತ್ತು ಆಸ್ತಿಗಳು,ಜನಸಂಖ್ಯಾಶಾಸ್ತ್ರ ಸಾಕ್ಷರತೆ, ಆರ್ಥಿಕ ಚಟುವಟಿಕೆ, ವಲಸೆ, ಫಲವಂತಿಕೆ ಇತ್ಯಾದಿಗಳು ದತ್ತಾಂಶದ ಪ್ರಾಥಮಿಕ ಮೂಲವಾಗಿದೆ.
ಜನಗಣತಿ ದತ್ತಾಂಶಗಳು ಕೇಂದ್ರ, ರಾಜ್ಯ ಸರ್ಕಾರಗಳ ಯೋಜನೆ ಮತ್ತು ನೀತಿಗಳ ರಚನೆ ಮತ್ತು ಪರಿಣಾಮಕಾರಿ ಸಾರ್ವಜನಿಕ ಆಡಳಿತಕ್ಕಾಗಿ ವ್ಯಾಪಕವಾಗಿ ಉಪಯೋಗಿಸಲ್ಪಡುತ್ತದೆ.
ಇದರ ಜೊತೆಗೆ ಲೋಕಸಭೆ,
ವಿಧಾನಸಭೆ, ಪಂಚಾಯತಿಗಳು ಮತ್ತು ಇತರ ಸ್ಥಳೀಯ ಸಂಸ್ಥೆಗಳ ಕ್ಷೇತ್ರ ವಿಂಗಡಣೆ ಮತ್ತು ಮೀಸಲಾತಿ ನಿಗದಿಪಡಿಸಲು ಜನಗಣತಿ ದತ್ತಾಂಶ ಬಳಸಲಾಗುತ್ತದೆ.
ಭಾರತದ ಜನಗಣತಿಯನ್ನು ಜನಗಣತಿ ಕಾಯ್ದೆ 1948 (1948 ರ 37) ಮತ್ತು ಜನಗಣತಿ ನಿಯಮಗಳು, 1990 ರ ನಿಬಂಧನೆಗಳು ಮತ್ತು ಅವುಗಳ ತಿದ್ದುಪಡಿಗಳಲ್ಲಿನ ಅವಕಾಶಗಳನ್ವಯ ನಡೆಸಲಾಗುತ್ತದೆ. ಜನಗಣತಿಯ ಸುಗಮ ಕಾರ್ಯಾಚರಣೆಗಾಗಿ ಜನಗಣತಿ ಕಾಯ್ದೆ 1948 ರ ಅಡಿಯಲ್ಲಿ ನಡೆಸಲು ಸಾರ್ವಜನಿಕರಿಗೆ ಹಲವಾರು ಜವಾಬ್ದಾರಿಗಳು ಮತ್ತು ಕರ್ತವ್ಯಗಳನ್ನು ನಿಗದಿಪಡಿಸಲಾಗಿದೆ. ಈ ಮಹತ್ವದ ಕೆಲಸವನ್ನು ನಿರ್ವಹಿಸುವಲ್ಲಿ ಸರ್ಕಾರಿ ಸಂಸ್ಥೆಗಳ ಪ್ರಯತ್ನಗಳಿಗೆ ಪೂರಕವಾಗಿ ಅಗತ್ಯವೆನಿಸಿದಾಗ ಸಾರ್ವಜನಿಕರಿಂದ ವಿವಿಧ ಸಾಮರ್ಥ್ಯಗಳಲ್ಲಿ ಸೇವೆ ಸಲ್ಲಿಸಲು ಸಿದ್ಧರಾಗಿರುವ ಮತ್ತು ಇಚ್ಛೆಯ ಸಹಕಾರವನ್ನು ಸರ್ಕಾರವು ಬಯಸುತ್ತದೆ.
ಜನಗಣತಿಯ ಸಂದರ್ಭದಲ್ಲಿ ಕೇಳಬಹುದಾದ ಪ್ರಶ್ನೆಗಳಿಗೆ ಸಂಬಂಧಿಸಿದಂತೆ ನಿಖರ ಮತ್ತು ನಿಸ್ಸಂದಿಗ್ಧವಾದ ಮಾಹಿತಿಯನ್ನು ಎಲ್ಲರೂ ಒದಗಿಸಬೇಕು ಎಂದು ತಿಳಿಸಿದ್ದಾರೆ.
ಗಣತಿದಾರರು ಕೇಳುವ ಯಾವುದೇ ಪ್ರಶ್ನೆಗೆ ಕಾನೂನು ಬದ್ಧವಾಗಿ ಉತ್ತರಿಸಬೇಕಾಗಿರುವ ಹೊಣೆಗಾರಿಕೆಯನ್ನು ಹೊಂದಿರುವ ಯಾವುದೇ ವ್ಯಕ್ತಿಯು ಉದ್ದೇಶಪೂರ್ವಕವಾಗಿ ಸುಳ್ಳು ಉತ್ತರ ನೀಡಿದಲ್ಲಿ ಅಥವಾ ಅವರ ಜ್ಞಾನ ಅಥವಾ ನಂಬಿಕೆಗೆ ತಕ್ಕಂತೆ ಉತ್ತರಿಸಲು ನಿರಾಕರಿಸಿದಲ್ಲಿ ಅವರು ಜನಗಣತಿ ಕಾಯ್ದೆ 1948 ರ ಸೆಕ್ಷನ್ 11 ರ ಅಡಿಯಲ್ಲಿ ಕಾನೂನು ಕ್ರಮಕ್ಕೆ ಗುರಿಯಾಗುತ್ತಾರೆ.
ಹಾಗಾಗಿ ಜಿಲ್ಲೆಯ ಜನತೆಗೆ ಗಣತಿದಾರರು ತಮ್ಮ ಮನೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಅವರ ಪ್ರಶ್ನೆಗಳಿಗೆ ಸರಿಯಾದ ಉತ್ತರ ನೀಡಿ ಸಹಕರಿಸುವ ಮೂಲಕ ಭಾರತ ಜನಗಣತಿ–2027 ಯಶಸ್ವಿಗೊಳಿಸಲು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬುದ್ಧನ ತತ್ವಗಳು ಅಳವಡಿಸಿಕೊಳ್ಳಿ ಮಲ್ಲಣ್ಣ ಕೊಡಚಿ



**ಜೇವರ್ಗಿ:ಏ.6:** ಬುದ್ಧನ ತತ್ವಗಳು ಆಚಾರ ವಿಚಾರಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಬೌದ್ಧ ಮಾಹ ಸ ಭಾ ಅಧ್ಯಕ್ಷ ಮಲ್ಲಣ್ಣ ಕೊಡಚಿ ಹೇಳಿದರು ನಂತರ ಮಾತನಾಡಿದ ತಾಲೂಕ ಬೌದ್ಧ ಮಾಹ ಸಭಾ ಉಪಾಧ್ಯಕ್ಷ ರಾಜಶೇಖರ್ ಶಿಲ್ಪಿ ಮಾತನಾಡುತ್ತಾ ಬುದ್ಧನ ಆದರ್ಶಗಳು ಪಂಚಶೀಲ ತತ್ವಗಳು ಜನಸಾಮಾನ್ಯರಿಗೆ ತಿಳಿಸಬೇಕೆಂದರು ನಂತರ ಆಸೆಯೇ ದುಃಖಕ್ಕೆ ಮೂಲ ಅತಿ ಆಸೆ ಮಾಡಬಾರದು ಎಂದು ಬುದ್ಧ ಹೇಳಿದ್ದಾನೆ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ವಾದ ಜಿಲ್ಲಾ ಸಂಘಟನಾ ಸಂಚಾಲಕರಾದ ಶ್ರೀಹರಿ ಕರ್ಕಳಿ ಹೇಳಿದರು ಮಾತನಾಡಿದ ಭಾರತೀಯ ದಲಿತ ಪ್ಯಾಂಥರ್ ಜಿಲ್ಲಾ ಖಜಾಂಚಿ ರವಿಕುಮಾರ್ ಕುಳ ಗೇರಿ ಮಾತನಾಡುತ್ತ ಬುದ್ಧನ ವಿಚಾರಗಳು ಜಗತ್ತಿಗೆ ಹಿಂದಿನ ದಿನಗಳಲ್ಲಿ ಪ್ರಸ್ತುತ ಅವರ ಶಾಂತಿ ಜಗತ್ತಿಗೆ ಅನ್ವಯವಾಗುತ್ತದೆ ಎಂದು ಹೇಳಿದರು ಈ ಸಂದರ್ಭದಲ್ಲಿ ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಮ್ಮ ಕೊಬ್ಬಿನ ತಾಲೂಕು ಸಂಚಾಲಕ ಸಿದ್ದು ಕೆರೂರ್ ಮರೆಪ್ಪ ಬೇಗಾರ್ ಶರಣು ಚನ್ನೂರ ಇದ್ದರು

# ಜಗಜೀವನ ರಾಮರ ಕೊಡುಗೆ ಅಪಾರ:ಲೋಣಿ




**ವಿಜಯಪುರ, ಏ. 6:**ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ 119 ನೇ ಜನ್ಮದಿನಾಚರಣೆಯನ್ನು ಭಾನುವಾರ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಆಚರಿಸಲಾಯಿತು.
ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಅವರು ಮಾತನಾಡಿ, ಡಾ. ಬಾಬು ಜಗಜೀವನ ರಾಂ ಅವರು ಸ್ವಾತಂತ್ರ್ಯ ಹೋರಾಟಗಾರ, ಅಸ್ಪ್ರಸತೆಯ ನಿವಾರಣಾ ಹೋರಾಟದ ಮುಂಚೂಣಿ ನಾಯಕ, ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ ಹಾಗೂ ಭಾರತದ ಮಾಜಿ ಉಪ ಪ್ರಧಾನಿಗಳಾಗಿ ದೇಶಕ್ಕಾಗಿ ಅಪಾರ ಸೇವೆ ಸಲ್ಲಿಸಿದ್ದಾರೆ. ಅವರು ಭಾರತದ ಸ್ವಾತಂತ್ರ್ಯ ಹೋರಾಟಗಾರ ಹಾಗೂ ಬಿಹಾರದ ರಾಜಕಾರಣಿಯಾಗಿದ್ದರು. 1935 ರಲ್ಲಿ ದಲಿತರಿಗೆ ಸಮಾನತೆಯನ್ನು ಸಾಧಿಸಲು ಸಮರ್ಪಿತವಾದ ಅಖಿಲ ಭಾರತ ಶೋಷಿತ ವರ್ಗಗಳ ಲೀಗ್ ಅನ್ನು ಸ್ಥಾಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದರು. 1937 ರಲ್ಲಿ ಬಿಹಾರ ವಿಧಾನಸಭೆಗೆ ಆಯ್ಕೆಯಾದರು. ನಂತರ ಅವರು ಗ್ರಾಮೀಣ ಕಾರ್ಮಿಕ ಚಳವಳಿಯನ್ನು ಸಂಘಟಿಸಿದರು. ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ ಅನೇಕ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದವರು. ತುರ್ತು ಪರಿಸ್ಥಿಯ ಸಮಯದಲ್ಲಿ ಅವರು ಇಂದಿರಾ ಗಾಂಧಿಯನ್ನು ಬೆಂಬಲಿಸಿದ್ದರು. ಹೀಗೆ ಪಕ್ಷಕ್ಕಾಗಿ ಹಾಗೂ ಹಿಂದುಳಿದ ವರ್ಗಕ್ಕಾಗಿ ಬಹಳಷ್ಟು ಅಭಿವೃದ್ಧಿ ಕಾರ್ಯ ಮಾಡಿದ ಧೀಮಂತನಾಯಕರಾಗಿದ್ದರು. ಇವತ್ತಿನ ಈ ಯುವನಾಯಕರಿಗೆ ಪಕ್ಷದಲ್ಲಿ ಬಂದ ನಂತರ ಏನಾದರು ಆಗಬೇಕು ಒಮ್ಮೆಲೆ ಶ್ರೀಮಂತರಾಗಬೇಕು. ಮತ್ತೊಬ್ಬರನ್ನು ಹೋಲಿಕೆ ಮಾಡಿಕೊಂಡು ಹೋಗುವುದು ಆಗಬಾರದು. ನಾವು ಸೇವಾಗ್ರಾಹಕರಾಗಬೇಕು, ಪಕ್ಷದಲ್ಲಿ ಸೇವೆ ಮಾಡಬೇಕು ಅನ್ನುವ ಭಾವನೆ ಬರಬೇಕು. ಪಕ್ಷದಿಂದ ನಮಗೆ ಏನಾದರೂ ಪ್ರತಿಫಲ ಸಿಗುತ್ತದೆ ಎಂಬ ಮನವರಿಕೆಯುಳ್ಳವರಾಗಬೇಕು. ಇವತ್ತು ಭಾರತದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕು. ಬಂದಾಗ ಮಾತ್ರ ಎಲ್ಲ ಸಮಾಜದ ಏಳ್ಗೆ ಆಗುತ್ತದೆ. ಇಂದು ಸಮಾಜದಲ್ಲಿ ಆಗುತ್ತಿರುವ ಒಡೆದಾಳುವ ನೀತಿ ನೋಡಿದರೆ ಭಯಾನಕ ಅನಿಸುತ್ತದೆ. ಕಾರಣ ಕಾಂಗ್ರೆಸ್ ಸರಕಾರ ಇದ್ದರೆ ಎಲ್ಲ ಸಮಾಜಗಳನ್ನು ಒಂದು ಗೂಡಿಸುವ ಕಾರ್ಯ ಆಗುತ್ತದೆ. ಇಲ್ಲದಿದ್ದರೆ ಸಮಾಜದಲ್ಲಿ ಒಡೆದಾಳುವ ಸಂದರ್ಭ ಬರುತ್ತದೆ. ಇಂದು ವಿಜಯಪುರ ಜಿಲ್ಲೆಯ ಎಲ್ಲ ನಾಯಕರು ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಬಾಗಲಕೋಟೆ ಚುನಾವಣೆಯಲ್ಲಿ ಭಾಗಿಯಾಗಿ ಪಕ್ಷದ ಅಭ್ಯರ್ಥಿ ಜಯಭೇರಿಗಾಗಿ ಶತಪ್ರಯತ್ನ ಮಾಡುತ್ತಿದ್ದಾರೆ. ನಾವೂ ಕೂಡಾ ಈ ಕಾರ್ಯಕ್ರಮ ಮಾಡಿಕೊಂಡು ಬಾಗಲಕೋಟೆಗೆ ಹೋಗುತ್ತಾ ಇದ್ದೇವೆ ಎಂದು ಹೇಳಿದರು.
ಕಾಂಗ್ರೆಸ್ ಹಿರಿಯ ಮುಖಂಡರಾದ ಕೆ. ಎಫ್. ಅಂಕಲಗಿ ವಕೀಲರು ಮಾತನಾಡಿ, ಬಾಬು ಜಗಜೀವನಾರಂ ಅವರು ಅತ್ಯಂತ ಜ್ಞಾನಿಗಳಾಗಿ ಸ್ವಾತಂತ್ರ್ಯ ಸಿಕ್ಕನಂತರ ನಮ್ಮ ದೇಶದಲ್ಲಿ ಆಹಾರದ ಕೊರತೆಯಿಂದ ಪರದೇಶದಿಂದ ಆಹಾರ ತರುವದನ್ನು ಮನಗಂಡು ನಮ್ಮ ದೇಶದಲ್ಲಿ ವ್ಯಸಾಯಕ್ಕೆ ಹೆಚ್ಚಿನ ಮಹತ್ವ ನೀಡಿ ಆಹಾರ ಉತ್ಪಾದನೆ ಹೆಚ್ಚಿಗೆ ಮಾಡಿದರು. ಇದರಿಂದ ಇವರಿಗೆ ಹಸಿರು ಕ್ರಾಂತಿಯ ಹರಿಕಾರ ಎಂದು ಸಾರಿದರು. ಇಂದಿರಾಗಾಂಧಿಯವರು ಪ್ರಧಾನ ಮಂತ್ರಿಯಾದಾಗ ಜಗಜೀವನರಾಂ ಅವರು ರಕ್ಷಣಾ ಮಂತ್ರಿಯಾಗಿದ್ದರು. ಆಗ ಬಂಗ್ಲಾ ದೇಶ ವಿಭಜನೆಯಾಯಿತು. ಆಗ ಇವರು ಮಾಡಿದ ಸೇವೆ ಶ್ಲಾಘನೀಯ ಎಂದು ಇವರ ಸಾಧನೆಗಳ ಕುರಿತು ಬಹಳ ವಿಚಾರಧಾರೆಗಳನ್ನು ಹೇಳಿದರು.
ಈ ಸಂದರ್ಭದಲ್ಲಿ ವಿದ್ಯಾವತಿ ಅಂಕಲಗಿ ವಕೀಲರು, ಉಸ್ಮಾನ ಪಟೇಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ. ಎಂ. ಮುಲ್ಲಾ, ವಸಂತ ಹೊನಮೋಡೆ, ದೇಸು ಚವ್ಹಾಣ, ಸಂತೋಷ ಬಾಲಗಾವಿ, ಚಂದ್ರಶೇಖರ ಪಾಸೋಡಿ, ಕೃಷ್ಣಾ ಲಮಾಣಿ, ಅಬೂಬಕರ ಕಂಬಾಗಿ, ತಾಜುದ್ದೀನ ಖಲೀಫಾ, ದಸ್ತಗೀರ ಸಾಲೋಟಗಿ, ಅರುಣ ಗೌಳಿ, ಇರ್ಷಾದ ಆಸಂಗಿ, ದಿಲೀಪ ಪ್ರಭಾಕರ ಹಾಗೂ ಇತರ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಾರ್ವಜನಿಕ ಶೌಚಾಲಯವಾಗಿ ಮಾರ್ಪಟ್ಟ ಹಳೆಯ ಸರ್ಕಾರಿ ಆಸ್ಪತ್ರೆ



**ಗುರುಮಠಕಲ್.:ಏ.6:**ಗಡಿಮೊಹಲ್ಲಾ ವಾರ್ಡ್ ಸಂಖ್ಯೆ 4ರಲ್ಲಿರುವ ಹಳೆಯ ಸರ್ಕಾರಿ ಆಸ್ಪತ್ರೆಯ ಕಟ್ಟಡವು ಇಂದು 'ಭೂತ ಬಂಗಲೆ'ಯಂತಾಗಿದ್ದು, ಅನೈರ್ಮಲ್ಯದ ಕೇಂದ್ರವಾಗಿ ಮಾರ್ಪಟ್ಟಿದೆ. ದಶಕಗಳ ಕಾಲ ಸಾರ್ವಜನಿಕರಿಗೆ ಆರೋಗ್ಯ ಸೇವೆ ನೀಡಿದ್ದ ಈ ಕಟ್ಟಡ, ಇಂದು ಮೂತ್ರ ವಿಸರ್ಜನೆ ಹಾಗೂ ಬಯಲು ಶೌಚದ ತಾಣವಾಗಿ ಪರಿಣಮಿಸಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.

ಈ ಕಟ್ಟಡವು ಹಿಂದೆ ಸರ್ಕಾರಿ ಆಸ್ಪತ್ರೆಯಾಗಿ ಕಾರ್ಯನಿರ್ವಹಿಸುತ್ತಿತ್ತು. ಆಸ್ಪತ್ರೆ ಸ್ಥಳಾಂತರಗೊಂಡ ನಂತರ ಇಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ (ಖಖಿಖ) ಆರಂಭಿಸಲಾಗಿತ್ತು. ಈಗ ಕಾಲೇಜು ಕೂಡ ತನ್ನದೇ ಆದ ಸ್ವಂತ ಕಟ್ಟಡಕ್ಕೆ ಸ್ಥಳಾಂತರಗೊಂಡಿದ್ದು, ಕಳೆದ ಹಲವು ವರ್ಷಗಳಿಂದ ಈ ವಿಶಾಲವಾದ ಜಾಗ ಮತ್ತು ಕಟ್ಟಡ ಅನಾಥವಾಗಿ ಬಿದ್ದಿದೆ.

ದುರ್ನಾತದ ನಡುವೆ ಜನಜೀವನಕಟ್ಟಡವು ಪಾಳುಬಿದ್ದಿರುವುದರಿಂದ ಸಾರ್ವಜನಿಕರು ಇದನ್ನು ಶೌಚಾಲಯವಾಗಿ ಬಳಸುತ್ತಿದ್ದಾರೆ. ಇದರಿಂದಾಗಿ ಸುತ್ತಮುತ್ತಲಿನ ಮನೆಗಳ ನಿವಾಸಿಗಳು, ಪಕ್ಕದಲ್ಲೇ ಇರುವ ಅಂಗನವಾಡಿ ಕೇಂದ್ರ ಮತ್ತು ಅಂಚೆ ಕಚೇರಿಗೆ ಬರುವ ಜನರು ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.
ಅಂಗನವಾಡಿ ಮಕ್ಕಳಿಗೆ ಆತಂಕ: ಪುಟ್ಟ ಮಕ್ಕಳು ಕಲಿಯುವ ಅಂಗನವಾಡಿ ಕೇಂದ್ರದ ಪಕ್ಕದಲ್ಲೇ ಇಷ್ಟೊಂದು ಅನೈರ್ಮಲ್ಯ ಇರುವುದು ಸಾಂಕ್ರಾಮಿಕ ರೋಗಗಳ ಭೀತಿಯನ್ನು ಹುಟ್ಟುಹಾಕಿದೆ.

ಅಧಿಕಾರಿಗಳ ಮೌನ: ಹಲವು ಬಾರಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.
ಸರ್ಕಾರಿ ಕಚೇರಿಗಳಿಗೆ ಜಾಗದ ಕೊರತೆಗುರುಮಠಕಲ್ ತಾಲ್ಲೂಕಾಗಿ ಘೋಷಣೆಯಾಗಿ ವರ್ಷಗಳೇ ಕಳೆದರೂ, ಹಲವು ತಾಲ್ಲೂಕು ಮಟ್ಟದ ಕಚೇರಿಗಳಿಗೆ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ. ಇಂತಹ ಸಂದರ್ಭದಲ್ಲಿ ಪಟ್ಟಣದ ಮಧ್ಯಭಾಗದಲ್ಲಿರುವ ಈ ವಿಶಾಲವಾದ ಜಾಗವನ್ನು ಸ್ವಚ್ಛಗೊಳಿಸಿ, ಹಳೆಯ ಕಟ್ಟಡವನ್ನು ತೆರವುಗೊಳಿಸಿದರೆ, ಹೊಸ ಕಚೇರಿಗಳ ಸಂಕೀರ್ಣ ನಿರ್ಮಾಣಕ್ಕೆ ಇದು ಅತ್ಯಂತ ಸೂಕ್ತ ಸ್ಥಳವಾಗಿದೆ.

"ಹಳೆಯ ಆಸ್ಪತ್ರೆ ಈಗ ಶೌಚಾಲಯದ ತಾಣವಾಗಿದೆ. ಇದರಿಂದ ಬಡಾವಣೆಯ ಜನರಿಗೆ ತುಂಬಾ ತೊಂದರೆಯಾಗುತ್ತಿದೆ. ಗಬ್ಬು ವಾಸನೆಯಿಂದಾಗಿ ರೋಗಗಳನ್ನು ಆಹ್ವಾನಿಸುವಂತಾಗಿದೆ. ಇದರ ಬಗ್ಗೆ ಅಧಿಕಾರಿಗಳಿಗೆ ಮನವಿ ಮಾಡಿದರೂ ಸ್ಪಂದಿಸುತ್ತಿಲ್ಲ."

ಸತೀಶ್ ತಿವಾರಿ, ಬಡಾವಣೆಯ ಮುಖಂಡರು.
"ಗುರುಮಠಕಲ್ ಪಟ್ಟಣದಲ್ಲಿ ಅನೇಕ ಸರ್ಕಾರಿ ಕಚೇರಿಗಳು ಖಾಸಗಿ ಜಾಗದಲ್ಲಿ ಬಾಡಿಗೆ ನೀಡಿ ನಡೆಯುತ್ತಿವೆ. ಇಂತಹ ವಿಶಾಲವಾದ ಸರ್ಕಾರಿ ಜಾಗವಿರುವಾಗ ಅದನ್ನು ಸದುಪಯೋಗ ಪಡಿಸಿಕೊಳ್ಳದೆ ಇರುವುದು ದುರಂತ. ಕೂಡಲೇ ಈ ಕಟ್ಟಡ ತೆರವುಗೊಳಿಸಿ ಕಚೇರಿಗಳನ್ನು ನಿರ್ಮಿಸಬೇಕು."

ದೀಪಕ್ ಹಜಾರೆ, ಬಡಾವಣೆಯ ಮುಖಂಡರು.

# ಸಮಾನತೆಗಾಗಿ ಹೋರಾಡಿದ ಮಹಾನ್ ನಾಯಕ ಬಾಬು ಜಗಜೀವನ ರಾಮ: ಡಿಸಿ ಹರ್ಷಲ್ ಭೋಯರ್



**ಯಾದಗಿರಿ:ಏ.6:** ಸಮಾಜದಲ್ಲಿ ಸಮಾನತೆ ಮತ್ತು ನ್ಯಾಯಕ್ಕಾಗಿ ತಮ್ಮ ಬದುಕನ್ನೇ ಅರ್ಪಿಸಿದ ಮಹಾನ್ ನಾಯಕ ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಯಾದಗಿರಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಜಿಲ್ಲಾಡಳಿತದ ಆಶ್ರಯದಲ್ಲಿ ನಡೆದ ಕಾರ್ಯಕ್ರಮವು ಗಂಭೀರತೆಯೊಂದಿಗೆ ನೆರವೇರಿತು.

ನಗರದ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ, ಬಾಬುಜೀ ಅವರ ಸಾಧನೆಗಳನ್ನು ಸ್ಮರಿಸಿದರು. ಆರಂಭದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು.
ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಬಾಬು ಜಗಜೀವನ ರಾಮ್ ಅವರು ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದ ದಿಟ್ಟ ನಾಯಕರು ಎಂದು ಹೇಳಿದರು. ಅವರ ತತ್ವಗಳು ಇಂದಿಗೂ ಪ್ರಸ್ತುತವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ಬಾಬು ಜಗಜೀವನ ರಾಮ್ ಅವರ ತತ್ವ ಸಿದ್ಧಾಂತಗಳನ್ನು ಎಲ್ಲರೂ ಪಾಲಿಸಬೇಕು. ವಿಶೇಷವಾಗಿ ಪಾಲಕರು ತಮ್ಮ ಮಕ್ಕಳಿಗೆ ಹಾಗೂ ಯುವಜನತೆಗೆ ಅವರ ಆದರ್ಶಗಳನ್ನು ಪರಿಚಯಿಸುವ ಜವಾಬ್ದಾರಿ ಹೊತ್ತುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಕುಮಲಯ್ಯ, ಯುವ ಸಬಲೀಕರಣ ಮತ್ತು ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ ಉಪಸ್ಥಿತರಿದ್ದರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಚನ್ನಬಸವ ಸ್ವಾಗತಿಸಿದರು. ಚಂದ್ರಶೇಖರ ಗೋಗಿ ಪ್ರಾರ್ಥನೆ ನೆರವೇರಿಸಿದರು.

ಇದೇ ಸಂದರ್ಭದಲ್ಲಿ ಸಮಾಜ ಸೇವಕರು ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.
ಇದಕ್ಕೂ ಮುನ್ನ ಬೆಳಿಗ್ಗೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಸಿಇಒ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಜಗಜೀವನ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸೂಚಿಸಿದರು.

ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಬಾಬುಜೀ ಅವರ ತತ್ವಾದರ್ಶಗಳು ಸಮಾಜದಲ್ಲಿ ಸಮಾನತೆ ಮತ್ತು ನ್ಯಾಯವನ್ನು ಬಲಪಡಿಸುವ ಶಕ್ತಿಯಾಗಿದೆ. ಅವುಗಳನ್ನು ಪ್ರತಿಯೊಬ್ಬರೂ ಪಾಲಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹೇಳಿದರು.

## ಮಾನವಿ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಪಟ್ಟಿ ಪ್ರಕಟ; ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ

**ರಾಯಚೂರು:**ರಾಯಚೂರು ಜಿಲ್ಲೆಯ ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ 06 ಅಂಗನವಾಡಿ ಕಾರ್ಯಕರ್ತೆ ಮತ್ತು 44 ಸಹಾಯಕಿಯರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಈಗಾಗಲೇ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಆದರಂತೆ ಈ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕವಾಗಿ ಆಯ್ಕೆ ಮಾಡಿರುವದರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಏಪ್ರಿಲ್ 13ರೊಳಗೆ ಸಲ್ಲಿಸಬಹುದಾಗಿದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಆಯ್ಕೆ ಸಮಿತಿ ಇವರಿಂದ ಅನುಮೋದನೆಗೊಂಡ ತಾತ್ಕಾಲಿಕ ಪಟ್ಟಿ ಪ್ರಕಟಿಸಲಾಗಿದ್ದು, ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು 07 ದಿನ ಕೆಲಸದ ದಿನಗಳ ಕಾಲಾವಕಾಶ ನೀಡಲಾಗಿದೆ. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮಾತ್ರ ಖುದ್ದಾಗಿ ಕಚೇರಿಗೆ ಬಂದು ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ಆಕ್ಷೇಪಣೆ ಸಲ್ಲಿಸುವವರು ನಿಖರವಾದ ದಾಖಲಾತಿಯೊಂದಿಗೆಆಕ್ಷೇಪಣೆ ಸಲ್ಲಿಸತಕ್ಕದ್ದು. ದಾಖಲೆ ಇಲ್ಲದಿದ್ದಲ್ಲಿ ಅಂತಹ ಆಕ್ಷೇಪಣೆಗಳನ್ನು ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದು ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಪ್ರಿಲ್ 09ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

**ರಾಯಚೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಏಪ್ರಿಲ್ 09ರ ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೇಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಿಲ್ಲೆಸೂಗೂರು: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಪಟ್ಟಿ ಪ್ರಕಟ; ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ

**ರಾಯಚೂರು:** ರಾಯಚೂರು ತಾಲೂಕಿನ ಗಿಲ್ಲೆಸೂಗೂರು ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ 2025-26ನೇ ಸಾಲಿಗೆ ಬರುವ ಒಟ್ಟು 13 ಅಂಗನವಾಡಿ ಕಾರ್ಯಕರ್ತೆ ಹಾಗೂ ಒಟ್ಟು 29 ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಈಗಾಗಲೇ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಆದರಂತೆ ಈ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕವಾಗಿ ಆಯ್ಕೆ ಮಾಡಿರುವದರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಏಪ್ರಿಲ್ 13ರೊಳಗೆ ಸಲ್ಲಿಸಬಹುದಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳ ಕುರಿತು ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಏಪ್ರಿಲ್ 13ರವರೆಗೆ ಕಚೇರಿಯ ಅವಧಿಯೊಳಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಕಾರ್ಯಾಲಯ ಗಿಲ್ಲೆಸೂಗೂರು ಆಶಾಪೂರ್ ಕ್ರಾಸ್ ಸ್ಟೇಷನ್ ಏರಿಯಾ ರಾಯಚೂರು ಇಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗಿಲ್ಲೆಸೂಗೂರು ಶಿಶು ಅಭಿವೃದ್ಧಿ ಯೋಜನ ಕಚೇರಿಯನ್ನು ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಗಿಲ್ಲೆಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.10 ರಂದು ರಾಜ್ಯಮಟ್ಟದ ಬೃಹತ್ ಜನ ಸಮಾವೇಶ: ಪೋಸ್ಟರ್ ಬಿಡುಗಡೆ




**ಕಲಬುರಗಿ,ಏ.6**-ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಲ್ಲಿ 40,000 ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವುದರ ವಿರುದ್ಧ ಕಳೆದ 4 ತಿಂಗಳಿನಿಂದ ಜನ ಹೋರಾಟ ನಡೆದಿದೆ. ಎಐಡಿಎಸ್‌ಓ ನೇತೃತ್ವದಲ್ಲಿ ರಾಜ್ಯದಾದ್ಯಂತ ಹಳ್ಳಿ-ಹಳ್ಳಿಗಳಲ್ಲಿ ಪೋಷಕರು ಹಾಗೂ ಗ್ರಾಮಸ್ಥರು ಸಾರ್ವಜನಿಕ ಶಿಕ್ಷಣ ಉಳಿಸಿ ಹೋರಾಟ ಸಮಿತಿಗಳನ್ನು ರಚಿಸಿಕೊಂಡು ನಮ್ಮೂರ ಶಾಲೆ ಮುಚ್ಚಲು ಬಿಡುವುದಿಲ್ಲ ಎಂದು ಒಕ್ಕೊರಲಿನಿಂದ ಧ್ವನಿಯೆತ್ತಿದ್ದಾರೆ. ನಾಡಿನ ಹೆಸರಾಂತ ಸಾಹಿತಿಗಳು, ಶಿಕ್ಷಣ ತಜ್ಞರು ಹಾಗೂ ಶಿಕ್ಷಣ ಪ್ರೇಮಿಗಳು ಬಡಮಕ್ಕಳನ್ನು ಶಿಕ್ಷಣದಿಂದ ಶಾಶ್ವತವಾಗಿ ದೂರ ತಳ್ಳುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಧಾರವನ್ನು ಖಂಡಿಸಿದ್ದಾರೆ.

ನಾಡಿನ ಜನತೆಯ ತೀವ್ರ ವಿರೋಧದ ನಡುವೆಯೂ ಸರ್ಕಾರ ಶಾಲೆಗಳನ್ನು ಮುಚ್ಚುವ ಕೆಲಸವನ್ನು ಮುಂದುವರಿಸಿದೆ. ಸರ್ಕಾರವು ಈಗಾಗಲೇ ಯಾವ-ಯಾವ ಶಾಲೆಗಳನ್ನು ವಿಲೀನಗೊಳಿಸಬೇಕೆಂದು ಮ್ಯಾಪಿಂಗ್ ನಡೆಸಿದೆ. ಅಧಿಕಾರಿಗಳಿಂದ ಮ್ಯಾಗ್ನೆಟ್ ಶಾಲೆಯ ಸಮೀಕ್ಷೆ ಮಾಡಿಸಲಾಗುತ್ತಿದೆ. ವಿಲೀನಗೊಳ್ಳುವ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮೌಖಿಕವಾಗಿ ಆದೇಶ ನೀಡಲಾಗಿದೆ. ಏಪ್ರಿಲ್ 9 ಮತ್ತು 10 ರಂದು ನಡೆಯಲಿರುವ ಪೋಷಕರ ಸಭೆಗಳಲ್ಲಿ , ಮುಂದಿನ ಶೈಕ್ಷಣಿಕ ವರ್ಷದಲ್ಲಿ ತಮ್ಮ ಮಕ್ಕಳನ್ನು ಕೆಪಿಎಸ್ ಶಾಲೆಗೆ ಕಳುಹಿಸುವಂತೆ ಒತ್ತಾಯಿಸಲು ಶಾಲೆಗಳಿಗೆ ನೋಟಿಸ್ ನೀಡಲಾಗಿದೆ. ಈ ಯೋಜನೆಯನ್ನು ಶತಾಯಗತಾಯ ಅನುಷ್ಠಾನಗೊಳಿಸಲು ಏಪ್ರಿಲ್ ಒಂದರಂದು ಎಲ್ಲಾ ಜಿಲ್ಲೆಗಳ ಡಿಡಿಪಿಐ ಹಾಗೂ ಬಿಇಓಗಳ ಸಭೆಯನ್ನು ನಡೆಸಿ ಶಾಲೆ ಮುಚ್ಚಲು ಕುತಂತ್ರ ನಡೆಸಿದೆ.

ಸರ್ಕಾರದ ಈ ಕಡು ಜನವಿರೋಧಿ ಮತ್ತು ನಿರಂಕುಶ ನಡೆಯ ವಿರುದ್ಧ ಹೋರಾಟವನ್ನು ತೀವ್ರಗೊಳಿಸಲು ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಗಳು ನಿರ್ಧರಿಸಿದೆ. ಈ ನಿಟ್ಟಿನಲ್ಲಿ ರಾಜ್ಯಮಟ್ಟದ ಜನ ಸಮಾವೇಶವನ್ನು ಏ.10 ರಂದು ರಾಜಧಾನಿ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಆಯೋಜಿಸಲಾಗಿದೆ. ರಾಜ್ಯದ ಹಳ್ಳಿ-ಹಳ್ಳಿಗಳಿಂದ ಪೋಷಕರು ಹಾಗೂ ವಿದ್ಯಾರ್ಥಿಗಳು 'ನಮ್ಮೂರ ಶಾಲೆ ಉಳಿಯಲಿ' ಎಂಬ ಘೋಷಣೆಗಳನ್ನು ಮೊಳಗಿಸುತ್ತ ಸಹಸ್ರ ಸಂಖ್ಯೆಯಲ್ಲಿ ಬೆಂಗಳೂರಿಗೆ ಬರಲು ತಯಾರಿ ನಡೆಸಿದ್ದಾರೆ.

"ನಾಡಿನ ಹಿರಿಯ ಸಾಹಿತಿಗಳಾದ ಡಾ.ಹಂಪ ನಾಗರಾಜಯ್ಯ, ಡಾ.ಕೆ.ಮರುಳಸಿದ್ದಪ್ಪ, ಪ್ರೊ.ಎಸ್.ಜಿ.ಸಿದ್ದರಾಮಯ್ಯ, ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿ ರಾಜ್ಯಾಧ್ಯಕ್ಷರು ಹಾಗೂ ಸಾಹಿತಿಗಳಾದ ಡಾ.ಅಲ್ಲಮಪ್ರಭು ಬೆಟ್ಟದೂರು, ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ.ಎ. ಮುರಿಗೆಪ್ಪ, ಹಿರಿಯ ಹೋರಾಟಗಾರರಾದ ರಾಘವೇಂದ್ರ ಕುಷ್ಟಗಿ, ಹಿರಿಯ ನ್ಯಾಯವಾದಿಗಳಾದ ಹೇಮಲತಾ ಮಹಿಷಿ, ಶಿಕ್ಷಣ ತಜ್ಞರಾದ ನಿರಂಜನರಾಧ್ಯ ವಿ ಪಿ, ದಲಿತ ಸಂಘರ್ಷ ಸಮಿತಿಯ ನಾಯಕರಾದ ಗುರುಪ್ರಸಾದ್ ಕೆರೆಗೋಡು, ಮಾವಳ್ಳಿ ಶಂಕರ್, ಅಕ್ಕಮಹಾದೇವಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ ಸಬಿಹಾ ಭೂಮಿಗೌಡ, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷರಾದ ಬಡಗಲಪುರ ನಾಗೇಂದ್ರ, ಸಾಮಾಜಿಕ ಹೋರಾಟಗಾರರಾದ ಉಗ್ರ ನರಸಿಂಹೇಗೌಡ, ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿಗಳಾದ ಅಜಯ್ ಕಾಮತ್, ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ವಿ.ಎನ್. ರಾಜಶೇಖರ್, ಎಐಕೆಕೆಎಂಎಸ್ ರೈತ ಸಂಘಟನೆಯ ರಾಜ್ಯಾಧ್ಯಕ್ಷರಾದ ಶಶಿಧರ್ ಎಂ, ಎಐಯುಟಿಯುಸಿ ಕಾರ್ಮಿಕ ಸಂಘಟನೆಯ ರಾಜ್ಯಾಧ್ಯಕ್ಷರಾದ ಸೋಮಶೇಖರ ಕೆ, ಎಐಎಂಎಸ್‌ಎಸ್ ಮಹಿಳಾ ಸಂಘಟನೆಯ ರಾಜ್ಯ ಕಾರ್ಯದರ್ಶಿಗಳಾದ ಶೋಭಾ ಎಸ್, ಎಐಡಿವೈಓ ಯುವಜನ ಸಂಘಟನೆಯ ರಾಜ್ಯ ಕಾರ್ಯದರ್ಶಿಗಳಾದ ಸಿದ್ಧಲಿಂಗ ಬಾಗೇವಾಡಿ ಹಾಗೂ ಎಐಡಿಎಸ್‌ಓ ರಾಜ್ಯಾಧ್ಯಕ್ಷರಾದ ಅಶ್ವಿನಿ ಕೆ.ಎಸ್ ಸೇರಿದಂತೆ ನಾಡಿನ ಅನೇಕ ಸಾಹಿತಿಗಳು, ಹೋರಾಟಗಾರರು ಹಾಗೂ ಶಿಕ್ಷಣ ತಜ್ಞರು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ವಿರುದ್ಧದ ರಾಜ್ಯಮಟ್ಟದ ಜನಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ ಎಂದು ಎಐಡಿಎಸ್‌ಓ ಜಿಲ್ಲಾ ಸಂಚಾಲಕರಾದ ಶಿಲ್ಪಾ ಬಿ.ಕೆ.ತಿಳಿಸಿದ್ದಾರೆ.

# ಟೆಹ್ರಾನ್ ಮೇಲೆ ದಾಳಿ: 13 ಮಂದಿ ಸಾವು



**ಟೆಹ್ರಾನ್, ಏ.6**-ಇರಾನ್‌ನ ರಾಜಧಾನಿ ಟೆಹರಾನ್‌ನ ವಸತಿ ಕಟ್ಟಡದ ಮೇಲೆ ನಡೆದ ದಾಳಿಯಲ್ಲಿ ಕನಿಷ್ಠ 13 ಮಂದಿ ಸಾವನ್ನಪ್ಪಿ ಹಲವು ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.ಇರಾನ್ ಸೇರಿದಂತೆ ಯುದ್ಧಪೀಡಿತ ಪ್ರದೇಶದಾದ್ಯಂತ ಹಿಂಸಾಚಾರ ತೀವ್ರಗೊಳ್ಳುತ್ತಿದ್ದು, ಇರಾನ್, ಇಸ್ರೇಲ್, ಕುವೈತ್ ಮತ್ತು ಲೆಬನಾನ್‌ನಲ್ಲಿ ನಡೆದ ದಾಳಿ, ಪ್ರತಿದಾಳಿ ಮತ್ತು ಸಾವುನೋವು ಮತ್ತು ಹಾನಿ ಉಂಟುಮಾಡುತ್ತಿವೆ ಎಂದು ವರದಿಯಾಗಿದೆ. ಅಮೆರಿಕ ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ 38 ನೇ ದಿನಕ್ಕೆ ಕಾಲಿಟ್ಟಿದ್ದು, ಯುದ್ಧ ಅಂತ್ಯವಾಗುವ ಲಕ್ಷಣಗಳಿಲ್ಲ. ಬದಲಾಗಿ ದಿನದಿಂದ ದಿನಕ್ಕೆ ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ.ಹಾರ್ಮುಜ್ ಜಲಸಂಧಿಯನ್ನು ತೆರೆಯುವಂತೆ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್‌ಗೆ 24 ಗಂಟೆಗಳ ಕಾಲ ಗಡುವು ನೀಡಿದ ನಡುವೆಯೇ ಇರಾನ್ ಮೇಲೆ ನಡೆದ ದಾಳಿಯಲ್ಲಿ 13ಕ್ಕೂ ಅಧಿಕ ಮಂದಿ ಮೃತಪಟ್ಟಿದ್ದಾರೆ.ಇರಾನ್ ಒಳಗೆ ಅಮೆರಿಕದ ಫೈಟರ್ ಜೆಟ್ ಪತನಗೊಂಡ ನಂತರ ಎರಡನೇ ವಾಯುಪಡೆಯ ಸಿಬ್ಬಂದಿಯನ್ನು ರಕ್ಷಿಸಿರುವುದಾಗಿ ಅಮೆರಿಕ ದೃಢಪಡಿಸಿದೆ. ಆದರೆ ಆ ಪ್ರದೇಶದಲ್ಲಿ ನಡೆದ ದಾಳಿಗಳಲ್ಲಿ ಹಲವಾರು ಜನರು ಸಾವನ್ನಪ್ಪಿದ್ದಾರೆ ಎಂದು ವರದಿಗಳು ತಿಳಿಸಿವೆ.ಇಸ್ರೇಲ್‌ನಲ್ಲಿ, ಹೈಫಾದಲ್ಲಿನ ವಸತಿ ಕಟ್ಟಡಕ್ಕೆ ಕ್ಷಿಪಣಿ ಡಿಕ್ಕಿ ಹೊಡೆದು ಜನರು ಗಾಯಗೊಂಡು ಕಾಣೆಯಾಗಿದ್ದಾರೆ. ಕೊಲ್ಲಿಯಾದ್ಯಂತ, ಕುವೈತ್‌ನಲ್ಲಿರುವ ಪ್ರಮುಖ ಇಂಧನ ಸೌಲಭ್ಯಗಳಿಗೂ ಸಹ ಹಾನಿಯಾಗಿದ್ದು, ಇದು ದೊಡ್ಡ ಹಾನಿಯನ್ನುಂಟುಮಾಡಿದೆ.ಈ ನಡುವೆ, ಬೈರುತ್ ಬಳಿ ಸೇರಿದಂತೆ ಲೆಬನಾನ್‌ನ ಕೆಲವು ಭಾಗಗಳಲ್ಲಿ ಇಸ್ರೇಲಿ ದಾಳಿಗಳು ಮುಂದುವರೆದಿದ್ದು, ಅಲ್ಲಿ ಸಾವುನೋವುಗಳು ವರದಿಯಾಗಿವೆ. ತಕ್ಷಣದ ಸಂಘರ್ಷ ವಲಯ ಮೀರಿ ಉದ್ವಿಗ್ನತೆ ಹರಡುತ್ತಿದೆ, ಪರಿಸ್ಥಿತಿ ಮತ್ತಷ್ಟು ಉಲ್ಬಣಗೊಂಡರೆ ಬಾಬ್ ಎಲ್-ಮಂದಾಬ್ ಜಲಸಂಧಿಯಂತಹ ಇತರ ಪ್ರಮುಖ ಮಾರ್ಗಗಳನ್ನು ಗುರಿಯಾಗಿಸಬಹುದು ಎನ್ನುವ ಎಚ್ಚರಿಕೆ ನೀಡಲಾಗಿದೆ.ಅಮೆರಿಕ ಮತ್ತು ಇರಾನ್ ನಡುವೆ ಪ್ರಾದೇಶಿಕ ಮಧ್ಯವರ್ತಿಗಳು ಯುದ್ಧದಲ್ಲಿ 45 ದಿನಗಳ ಕದನ ವಿರಾಮ ಯೋಜನೆಯನ್ನು ಮತ್ತಷ್ಟು ಮುಂದೆಕ್ಕೆ ತೆಗೆದುಕೊಂಡು ಹೋಗಿದ್ದಾರೆ ಎನ್ನಲಾಗಿದೆ.

ಮಧ್ಯವರ್ತಿಗಳ ಪ್ರಕಾರ ಕಳೆದ ಎರಡು ಹಂತದ ಒಪ್ಪಂದವನ್ನು ಮಧ್ಯಸ್ಥಿಕೆ ವಹಿಸಲು ಕೆಲಸ ಮಾಡುತ್ತಿದ್ದಾರೆ. ಮೊದಲ ಹಂತವು 45 ದಿನಗಳ ಕದನ ವಿರಾಮವನ್ನು ಪ್ರಸ್ತಾಪಿಸುತ್ತದೆ, ಈ ಸಮಯದಲ್ಲಿ ಎರಡೂ ಕಡೆಯವರು ಯುದ್ಧಕ್ಕೆ ಶಾಶ್ವತ ಮಾತುಕತೆ ನಡೆಸುವುದು ಅಗತ್ಯ ಮತ್ತು ಅನಿವಾರ್ಯವಾಗಿದೆ.

# ಉಪಕದನ: ಕಾಂಗ್ರೆಸ್ ಸೋಲು- ಛಲವಾದಿ



**ದಾವಣಗೆರೆ, ಏ. 6**- ರಾಜ್ಯದಲ್ಲಿ ಈಗ ಎದುರಾಗಿರುವ ದಾವಣಗೆರೆ ಮತ್ತು ಬಾಗಲಕೋಟೆ ಉಪ ಚುನಾವಣೆಗೆ ಸಂಬಂಧಿಸಿದಂತೆ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೋಲಲಿದೆ. ಬಿಜೆಪಿ ಗೆಲುವು ಸಾಧಿಸಲಿದೆ ಎಂದು ವಿಧಾನ ಪರಿಷತ್ತಿನ ವಿಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ನಡೆಸ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಉಚಿತ, ಖಚಿತ, ನಿಶ್ಚಿತ ಎಂದಿತ್ತು. ಈಗ ಆ ಮಾತು ಬದಲಾಗಿ ಕಾಂಗ್ರೆಸ್ ಪಕ್ಷಕ್ಕೆ ಚುನಾವಣೆ ಖಚಿತ ಸೋಲು ನಿಶ್ಚಿತ ಎಂದಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಸಿಎಂ ಮತದಾರರಿಗೆ ದಾವಣಗೆರೆಯಲ್ಲಿ ಅಹಿಂದಕ್ಕೆ ಓಟು ಹಾಕಬೇಡಿ ಎನ್ನುತ್ತಾರೆ. ಬಾಗಲಕೋಟೆಯಲ್ಲಿ ಅಹಿಂದಕ್ಕೆ ಓಟು ಹಾಕಿ ಎನ್ನುತ್ತಿದ್ದಾರೆ. ಇವರ ಗೊಂದಲದ ಹೇಳಿಕೆಗಳನ್ನು ಜನರು ಗಮನಿಸುತ್ತಿದ್ದಾರೆ. ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಇದಲ್ಲದೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಒಬ್ಬ ಮತದಾರರಿಗೆ ಅದರಲ್ಲೂ ಹಿಂದೂಗಳಿಗೆ 7ಸಾವಿರ, ಮುಸಲ್ಮಾನರಿಗೆ 10 ಸಾವಿರ ಎಂದು ಹೇಳಲಾಗುತ್ತಿದೆ. ಒಟ್ಟಾರೆ ಹೇಳುವುದಾದರೆ ಈ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಸಂಪತ್ತಿಗೆ ಸವಾಲ್ ಹಾಡಿದ್ದಾರೆ. ನಿಮ್ಮ ಸಂಪತ್ತು ಕೆಲಸ ಮಾಡಲ್ಲ. ನಮ್ಮ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ. ಎಲ್ಲಾ ವರ್ಗದ ಓಟುಗಳು ನಮಗೆ ಸಿಗಲಿವೆ. ಉತ್ತಮ ನಡೆತೆ ಇರುವ ಬಿಜೆಪಿ ಅಭ್ಯರ್ಥಿಗಳು ಎರಡೂ ಕಡೆ ಗೆಲ್ಲಲಿದ್ದಾರೆ ಎಂದು ತಿಳಿಸಿದರು.

ಏಪ್ರಿಲ್ 7ರಂದು ಅಂದರೆ ನಾಳೆ ಸಂಜೆ 5ಕ್ಕೆ ಸಿಎಂ ಸೇರಿದಂತೆ ಎಲ್ಲರೂ ದಾವಣಗೆರೆ ಕ್ಷೇತ್ರವನ್ನು ಬಿಡಬೇಕು. ನಾವುಗಳು ಸಹ ಕ್ಷೇತ್ರವನ್ನು ಬಿಡಬೇಕು. ನಾನು ಇಲ್ಲಿ ಹೇಳುವುದೇನೆಂದರೆ ಚುನಾವಣೆ ಮುಗಿದ ನಂತರ ಸಿದ್ದರಾಮಯ್ಯ ಅವರು ದಾವಣಗೆರೆಗೆ ಮುಖ್ಯ ಮಂತ್ರಿಯಾಗಿ ಮತ್ತೆ ಬರುವುದಿಲ್ಲ ಎಂದು ಹೇಳಿದರು.

ಜಮೀರ್ ಅಹಮದ್ ಒಲ್ಲದ ಮನಸ್ಸಿನಿಂದ ದಾವಣಗೆರೆಗೆ ಬಂದು ಹೋಗಿದ್ದಾರೆ. ಓಟು ಕೇಳಲು ಕಬಾಬ್ ತಿನ್ನುಸುತ್ತಿದ್ದೀರಿ. ಇದು ಕಾಂಗ್ರೆಸ್ ಸಂಸ್ಕೃತಿನಾ ಎಂದು ಪ್ರಶ್ನಿಸಿದರು.

ಒಳ ಮೀಸಲಾತಿ ವಿಚಾರದಲ್ಲಿ ಅವೈಜ್ಞಾನಿಕ ನಿರ್ಧಾರ ಕೈಗೊಂಡಿದ್ದಾರೆ. ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹಾದೇವಪ್ಪ ಅವರ ತೀರ್ಮಾನವೇ ಇಷ್ಟೆಲ್ಲಾ ಗೊಂದಲಗಳಿಗೆ ಕಾರಣ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ ನಾಗಪ್ಪ, ಬಿಜೆಪಿ ರಾಜಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ಮಾಜಿ ಸಂಸದ ಡಾ.ಜಿ.ಎಂ. ಸಿದ್ದೇಶ್ವರ, ವಿಪ ಸದಸ್ಯ ಕೆ.ಎಸ್.ನವೀನ, ಲೋಕಿಕೆರೆ ನಾಗರಾಜ್, ಡಾ.ಎ.ಹೆಚ್. ಶಿವಯೋಗಿ ಸ್ವಾಮಿ, ಬಿ.ಎಂ.ಸತೀಶ್ ಕೊಳೇನಹಳ್ಳಿ, ಬಾತಿ ವೀರೇಶ್ ಇತರರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE